EMAIL : dairyadadaari@gmail.com ಸಂಪುಟ: 01 ಸಂಚಿಕೆ: 206
ಬೆಲೆ ರೂ : 2.00
ರಾಯಚೂರು
ಪುಟ: 4

ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ
Cell : 6360866626, 9036887793

KANNADA DAILY NEWS PAPER
ಕನ್ನಡ ದಿನಪತ್ರಿಕೆ

DAIRYADA DAARI
RNI NO: KNKAN/25/A2795 ಶನಿವಾರ: 25–07–2026

**20 ನಕಲಿ ವೈದ್ಯರ ವಿರುದ್ಧ ಕ್ರಮ । ಕ್ಲಿನಿಕ್‌ಗಳು ಬಂದ್ । 2.20 ಲಕ್ಷ ದಂಡ ವಸೂಲಿ**

## ನಕಲಿ ವೈದ್ಯರಿಗೆ ಜಿಲ್ಲೆಯಲ್ಲಿ 'ನೋ ಎಂಟ್ರಿ'!

### ಕೆಪಿಎಮ್‌ಇ ಕಾಯ್ದೆ ಉಲ್ಲಂಘಿಸಿದರೆ ಎಫ್‌ಐಆರ್: ಜಿಲ್ಲಾಧಿಕಾರಿ ಪೂವಿತಾ ಎಸ್. ಎಚ್ಚರಿಕೆ

ಧೈರ್ಯದ ದಾರಿ

**ಮುಖ್ಯಾಂಶಗಳು:**

–ನಕಲಿ ವೈದ್ಯರು, ಅನಧಿಕೃತ ಆಸ್ಪತ್ರೆಗಳ ವಿರುದ್ಧ ಕಠಿಣ ಕ್ರಮ
–ಕೆಪಿಎಮ್‌ಇ ಉಲ್ಲಂಘಿಸಿದರೆ ಎಫ್‌ಐಆರ್
–6 ತಿಂಗಳಲ್ಲಿ 20 ನಕಲಿ ವೈದ್ಯರ ವಿರುದ್ಧ ಕ್ರಮ
–20 ಕ್ಲಿನಿಕ್‌ಗಳು ಬಂದ್; 2.20 ಲಕ್ಷ ದಂಡ
–ವೈದ್ಯರ ಚೀಟಿ ಇಲ್ಲದೆ ಔಷಧಿ ನೀಡಿದರೆ ಕ್ರಮ
–ಮೆಡಿಕಲ್ ಅಂಗಡಿಗಳ ಅಕ್ರಮ ಕ್ಲಿನಿಕ್‌ಗಳ ಪರಿಶೀಲನೆ
–ಪ್ರಯೋಗಾಲಯ ವರದಿಗೆ ತಜ್ಞರ ದೃಢೀಕರಣ ಕಡ್ಡಾಯ
–ಬೇರೆ ವೈದ್ಯಕೀಯ ಪದ್ಧತಿಯಲ್ಲಿ ಚಿಕಿತ್ಸೆ ನೀಡಿದರೆ ಎಫ್‌ಐಆರ್
–ಆಸ್ಪತ್ರೆ ಆರಂಭಕ್ಕೂ ಮುನ್ನ ಕೆಪಿಎಮ್‌ಇ ನೋಂದಣಿ ಕಡ್ಡಾಯ
–ನೋಂದಣಿ ಮುಗಿಯುವ 3 ತಿಂಗಳ ಮುಂಚೆ ನವೀಕರಣ
–ಪರವಾನಗಿ ಇಲ್ಲದ ಆಸ್ಪತ್ರೆಗಳ ಮೇಲೆ ದಾಳಿ



**ರಾಯಚೂರು ಜುಲೈ 24:** ಜಿಲ್ಲೆಯಲ್ಲಿ ಕೆಪಿಎಮ್‌ಇ ಕಾಯ್ದೆಯಡಿ ನೋಂದಾಯಿಸದ ಅಥವಾ ನಿಯಮ ಉಲ್ಲಂಘಿಸಿ ಕಾರ್ಯನಿರ್ವಹಿಸುತ್ತಿರುವ ನಕಲಿ ವೈದ್ಯರು, ಆಸ್ಪತ್ರೆಗಳು ಮತ್ತು ವ್ಯಸನ ಮುಕ್ತಿ ಕೇಂದ್ರಗಳ ವಿರುದ್ಧ ಕಠಿಣ ಕ್ರಮಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜುಲೈ 24ರ ಶುಕ್ರವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಜಿಲ್ಲಾ ಕೆಪಿಎಮ್‌ಇ ಕಾಯ್ದೆ ಅನುಷ್ಠಾನ ಹಾಗೂ ಪರಿಶೀಲನಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ರಾಯಚೂರು ಜಿಲ್ಲೆಯ ನಗರ ಹಾಗೂ ಗ್ರಾಮೀಣ ಪ್ರದೇಶದಲ್ಲಿ ಪರವಾನಗಿ ಇಲ್ಲದ ಆಸ್ಪತ್ರೆಗಳ ಮೇಲೆ ದಾಳಿ ನಡೆಸಿ, ನಕಲಿ ವೈದ್ಯರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಬೇಕು. ವೈದ್ಯರಲ್ಲದವರು ಅನಧಿಕೃತವಾಗಿ ವೈದ್ಯ ವೃತ್ತಿಯನ್ನು ಮಾಡುತ್ತಿರುವ ನಕಲಿ ವೈದ್ಯರ ಮಾಹಿತಿ ಪಡೆಯಬೇಕು. ವೈದ್ಯ ಪದವಿ ಪಡೆಯದೆ ಜನರ ಜೀವಕ್ಕೆ ತೊಂದರೆಯುಂಟು ಮಾಡುವುದನ್ನು ತಡೆಯಲು ಎಲ್ಲ ನಕಲಿ ವೈದ್ಯರನ್ನು ಗುರ್ತಿಸಿ ನಿರ್ದಾಕ್ಷಿಣ್ಯವಾಗಿ ಕಾನೂನಾತ್ಮಕವಾಗಿ ಹಾಗೂ ಕೆಪಿಎಮ್‌ಇ ಕಾಯ್ದೆ–2007ರ ಅಡಿ ಕ್ರಮ ಜರುಗಿಸಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಮೆಡಿಕಲ್ ಅಂಗಡಿಗಳ ಮಾಲಿಕರು ಕೆಪಿಎಮ್‌ಇ ಅಡಿ ಅನುಮತಿ ಪಡೆಯದೆ ಕ್ಲಿನಿಕ್‌ಗಳನ್ನು ತಮ್ಮ ಅಂಗಡಿಯ ಒಳಭಾಗ, ಪಕ್ಕದಲ್ಲಿ ತೆರೆದಿರುವುದನ್ನು ಪರಿಶೀಲಿಸಿ, ಒಂದು ವೇಳೆ ಚಿಕಿತ್ಸೆ ನೀಡುವ ವೈದ್ಯರ ಹೆಸರಿನಲ್ಲಿ ಕ್ಲಿನಿಕ್ ಇರದಿದ್ದಲ್ಲಿ ಮೆಡಿಕಲ್ ಅಂಗಡಿಗಳ ವಿರುದ್ಧ ಕ್ರಮ ಜರುಗಿಸಲು ಸಹಾಯಕ ಔಷಧ ನಿಯಂತ್ರಕರಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಯಾವುದೇ ವೈದ್ಯಕೀಯ ಪದವಿ ಪಡೆದು ಆಸ್ಪತ್ರೆ ಆರಂಭಿಸುವ ಮೊದಲು ಕೆಪಿಎಮ್‌ಇ ಕಾಯ್ದೆ–2007ರಡಿ ಖಡ್ಡಾಯವಾಗಿ ನೋಂದಣಿ ಮಾಡಿಸಬೇಕು. ಅನುಮತಿ ಪಡೆದ ನಂತರವೇ ಕ್ಲಿನಿಕ್, ಆಸ್ಪತ್ರೆ ಆರಂಭಿಸಬೇಕು. ಹಾಗೆಯೇ ಒಮ್ಮೆ ನೋಂದಣಿ ಮಾಡಿಸಿದ ನಂತರ 05 ವರ್ಷಗಳವರೆಗೆ ಆಸ್ಪತ್ರೆ ನಡೆಸಲು ಆನುಮತಿ ಇದ್ದು, ನೋಂದಣಿ ಅವಧಿ ಮುಗಿಯಲು ಇನ್ನೂ 03 ತಿಂಗಳು ಇರುವಾಗಲೇ ಪುನಃ ನೊಂದಣಿ ಮಾಡಿಸಲು ಸಂಬಂಧಿಸಿದ ಇಲಾಖೆಯ ಅಗತ್ಯ ಕ್ರಮವಹಿಸಬೇಕೆಂದು ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು. ಅಲೋಪತಿ ವಿದ್ಯಾರ್ಹತೆ ಹೊಂದಿದವರು ಅಲೋಪತಿ ಚಿಕಿತ್ಸಾ ಪದ್ಧತಿ ಹಾಗೂ ಆಯುರ್ವೇದ ವೈದ್ಯಕೀಯ ಪದವಿ ಪಡೆದವರು ಆಯುಷ್ಯ ಪದ್ಧತಿಯಲ್ಲಿ ಚಿಕಿತ್ಸೆ ಮಾತ್ರ ನೀಡಬೇಕು. ಒಂದು ವೇಳೆ ನಿಯಮ ಮೀರಿ ಬೇರೆ ವೈದ್ಯ ವೃತ್ತಿ ಮಾಡುತ್ತಿದ್ದರೆ ಕೆಪಿಎಮ್‌ಇ ಕಾಯ್ದೆ–2007ರಡಿ ಕ್ರಮ ಜರುಗಿಸಲಾಗುವುದು. 2ನೇಪುಟಕ್ಕೆ

## ಪರೀಕ್ಷಾ ಅಕ್ರಮ ತಡೆ ಕಾಯ್ದೆಗೆ ಸಂಪುಟ ಅಂಕಿತ



**ನವದೆಹಲಿ:**ನೀಟ್ ಪರೀಕ್ಷಾ ಅಕ್ರಮ ಮತ್ತು ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣವನ್ನು ಖಂಡಿಸಿ ಕಾಕ್ರೋಚ್ ಜನತಾ ಪಾರ್ಟಿ ಕರೆ ನೀಡಿದ್ದ ದೇಶವ್ಯಾಪಿ ಪ್ರತಿಭಟನೆ ಶುಕ್ರವಾರ ತೀವ್ರ ಸ್ವರೂಪ ಪಡೆದುಕೊಂಡಿದೆ. ಒಂದೆಡೆ ಸಿಜೆಪಿ ಮುಖಂಡರು ಹಾಗೂ ಕೇಂದ್ರ ಸರ್ಕಾರದ ಸಚಿವರ ನಡುವೆ ನವದೆಹಲಿಯ 'ಕಾನ್‌ಸ್ಟಿಟ್ಯೂಷನ್ ಕ್ಲಬ್'ನಲ್ಲಿ ಮಾತುಕತೆ ಪೂರ್ಣಗೊಂಡಿದ್ದರೆ, ಇನ್ನೊಂದೆಡೆ ಪ್ರಶ್ನೆಪತ್ರಿಕೆ ಸೋರಿಕೆ ತಡೆಯಲು ಕಾನೂನನ್ನು ಮತ್ತಷ್ಟು ಬಿಗಿಗೊಳಿಸುವ ವಿಧೇಯಕ ತಿದ್ದುಪಡಿಗೆ ಕೇಂದ್ರ ಸಂಪುಟ ಸಭೆ ಅನುಮೋದನೆ ನೀಡಿದೆ.

ಕೇಂದ್ರ ಸಚಿವರಾದ ಜಗತ್ ಪ್ರಕಾಶ್ ನಡ್ಡಾ ಹಾಗೂ ಜಿತೇಂದ್ರ ಸಿಂಗ್ ಅವರು ಸಿಜೆಪಿ ವಕ್ತಾರರಾದ ಅಶುತೋಷ್ ರಾಂಕಾ ಮತ್ತು ಸೌರವ್ ದಾಸ್ ಅವರೊಂದಿಗೆ ನವದೆಹಲಿಯ ತಟಸ್ಥ ಸ್ಥಳವಾದ ಕಾನ್‌ಸ್ಟಿಟ್ಯೂಷನ್ ಕ್ಲಬ್‌ನಲ್ಲಿ ಸಭೆ ನಡೆಸಿ ಚರ್ಚಿಸಿದರು.
ವಿರೋಧೀ ಕಾಯ್ದೆಗೆ ತಿದ್ದುಪಡಿ: ಸಾರ್ವಜನಿಕ ಪರೀಕ್ಷೆಗಳ (ಅಕ್ರಮ ತಡೆ) ಕಾಯ್ದೆ 2024ಕ್ಕೆ ಪ್ರಸ್ತಾವಿತ ತಿದ್ದುಪಡಿಗಳನ್ನು ತರಲು ಕೇಂದ್ರ ಸಚಿವ ಸಂಪುಟ ಅಂಕಿತ ಹಾಕಿದೆ.
ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆಗೆ ಆಗ್ರಹಿಸಿ ಮತ್ತು ಜವಾಬ್ದಾರಿ ನಿಗದಿಪಡಿಸುವಂತೆ ಆಗ್ರಹಿಸಿ ಸಿಜೆಪಿ ಪ್ರತಿಭಟನೆ ಮುಂದುವರಿಸಿದೆ 26 ದಿನಗಳಿಂದ ಉಪವಾಸ ಸತ್ಯಾಗ್ರಹ ನಡೆಸುತ್ತಿದ್ದ ಹಿರಿಯ ಹೋರಾಟಗಾರ ಸೋನಮ್ ವಾಂಗ್‌ಚುಕ್ ಅವರಿಗೆ ಕೇಂದ್ರ ಸಚಿವರು ಭರವಸೆ ನೀಡಿದ ಬೆನ್ನಲ್ಲೇ ಅವರು ತಮ್ಮ ನಿರಾಹಾರ ಸತ್ಯಾಗ್ರಹವನ್ನು ಕೊನೆಗೊಳಿಸಿದ್ದಾರೆ 2ನೇ ಪುಟಕ್ಕೆ

## ಸರಕಾರದಿಂದ ಮಕ್ಕಳಿಗೆ ಕಲಿಕೆಗೆ ಬೇಕಾದಂತ ಅಗತ್ಯ ಸೌಲಭ್ಯಗಳನ್ನು ನೀಡಲಾಗುತ್ತಿದೆ: ಖಾಲಿದ್ ಅಹ್ಮದ್



ಧೈರ್ಯದ ದಾರಿ

**ಮಾನ್ವಿ:** ತಾಲೂಕಿನ ಗೋರ್ಕಲ್ ಗ್ರಾಮಕ್ಕೆ ತಾಲೂಕು ಪಂಚಾಯಿತಿ ಕಾರ್ಯನಿರ್ವಹಕ ಅಧಿಕಾರಿ ಖಾಲಿದ್ ಅಹ್ಮದ್ ಭೇಟಿ ನೀಡಿ ಗ್ರಾಮದ ಸರಕಾರಿ ಉನ್ನತಿಕರಿಸಿದ ಮಾದರಿ ಹಿರಿಯ ಪ್ರಾಥಮಿಕ ಶಾಲೆಯನ್ನು ಪರಿಶೀಲಿಸಿ ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ದೊರೆಯುತ್ತಿರುವ ಅಗತ್ಯ ಮೂಲಸೌಲಭ್ಯಗಳ ಬಗ್ಗೆ ಮುಖ್ಯ ಗುರು ರಮೇಶ್ ಕುರ್ಡಿಯವರಿಂದ ಮಾಹಿತಿ ಪಡೆದು ಮಾತನಾಡಿ ಮಕ್ಕಳಿಗೆ ಕಲಿಕೆಗೆ ಬೇಕಾದಂತ ಸೌಲಭ್ಯಗಳು ಈಗಾಗಲೇ ಸರಕಾರದಿಂದ ನೀಡಲಾಗುತ್ತಿದು. ಶಾಲೆಯ ಮಕ್ಕಳಿಗೆ ಅಗತ್ಯವಿರುವ ಶುದ್ಧ ಕುಡಿಯುವ ನೀರು .ಶಾಲಾ ಕೊಠಡಿಗಳ ನವೀಕರಣ, ಶೌಚಾಲಯ ವ್ಯವಸ್ಥೆ ಹಾಗೂ ಶಾಲೆಯ ಮುಂದಿನ ಚರಂಡಿ ನಿರ್ಮಾಣ ಕಾಮಗಾರಿ ,ತಡೆಗೋಡೆ ನಿರ್ಮಾಣ ಕುರಿತು ಮೇಲಾಧಿಕಾರಿಗಳೊಂದಿಗೆ ಚರ್ಚಿಸಿ ಶೀಘ್ರವೇ ಕ್ರಮ ಕೈಗೊಳ್ಳಲಾಗುವುದು ಎಂದು ಬರವಸೆ ನೀಡಿದರು

ಗೋರ್ಕಲ್ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಅಕ್ತಾರ್ ಪಾಷಾ, ಸಹ ಶಿಕ್ಷಕಿ ಈರಮ್ಮ ಚಂದ್ರಶೇಖರ, ಸುರೇಶ, ಪಂಚಾಯತಿ ಸಿಬ್ಬಂದಿ ಗೋಪಿ ಸೇರಿದಂತೆ ಇನ್ನಿತರರು ಇದ್ದರು.

## ತಾಲೂಕಿನ ಅರ್ಹ ಹಾಗೂ ನೈಜ ಮತದಾರರು ಮತಪಟ್ಟಿಯಲ್ಲಿ ನೊಂದಾಯಿಸಿಕೊಳ್ಳಿ: ದೀಪಾ ಅರಳಿಕಟ್ಟಿ




ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ಬಸ್ ನಿಲ್ದಾಣದಲ್ಲಿ ತಾಲೂಕು ಪಂಚಾಯಿತಿ ವತಿಯಿಂದ ನಡೆದ ಸಮಗ್ರ ಮತಪಟ್ಟಿ ಪರಿಷ್ಕರಣೆ ಜಾಗೃತಿ ಅಭಿಯಾನ ಕಾರ್ಯಕ್ರಮಕ್ಕೆ ತಾಲೂಕು ಪಂಚಾಯಿತಿ ಸಹಾಯಕ ನಿರ್ದೇಶಕರಾದ ದೀಪಾ ಅರಳಿಕಟ್ಟಿ ಚಾಲನೆ ನೀಡಿ ಮಾತನಾಡಿ ಮತದಾರರ ಪಟ್ಟಿಯಲ್ಲಿ ತಾಲೂಕಿನ ಅರ್ಹ ಹಾಗೂ ನೈಜ ಮತದಾರರು ದೂರ ಉಳಿಯಬಾರದು ನಮ್ಮ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಉಳಿಸುವುದಕ್ಕಾಗಿ ಪ್ರತಿಯೊಬ್ಬರು .ಎಸ್.ಐ.ಆರ್–2026 ರಲ್ಲಿ ಸಕ್ರಿಯವಾಗಿ ಭಾಗವಹಿಸುವುದು ಅಗತ್ಯ ಎಂದು ತಿಳಿಸಿದರು, ಪಟ್ಟಣದ ಬಸ್ ನಿಲ್ದಾಣ, ಪಂಪಾ ಉದ್ಯಾನ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ ಹತ್ತಿರ, ಸಾರ್ವಜನಿಕರಿಗೆ ಕರಪತ್ರಗಳನ್ನು ವಿತರಿಸಿ ಜಾಗೃತಿ ಮೂಡಿಸಲಾಯಿತು.

ತಾಲೂಕಿನ ನರೇಗಾ ಸಿಬ್ಬಂದಿಗಳು, ಸಂಜೀವಿನಿ ಯೋಜನೆಯ ಸಿಬ್ಬಂದಿಗಳು, ತಾಲೂಕು ಪಂಚಾಯತ ಸಿಬ್ಬಂದಿಗಳು ಜಾಗೃತಿ ಜಾಥದಲ್ಲಿ ಭಾಗವಹಿಸಿದರು. ತಾಲೂಕು ಪಂಚಾಯಿತಿ ವ್ಯವಸ್ಥಪಕರಾದ ಬಸವರಾಜ ನೇಗಿನಾಳ ಸೇರಿದಂತೆ ಇನ್ನಿತರರು ಇದ್ದರು.

## ಎಸ್.ಐ.ಆರ್ ಜಾಗೃತಿ: ಬೈಕ್ ರ್ಯಾಲಿಗೆ ಚಾಲನೆ – ಮತದಾರರ ಪರಿಷ್ಕರಣೆ ಪೋಸ್ಟರ್ ಹಿಡಿದು ಅರಿವು ಮೂಡಿಸಿದ ಅಧಿಕಾರಿಗಳು

ಧೈರ್ಯದ ದಾರಿ



**ಸಿರವಾರ, ಜುಲೈ 24:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್ ಹಾಗೂ ತಾಲ್ಲೂಕು ಸ್ವೀಪ್ ಸಮಿತಿ ಸಂಯುಕ್ತಾಶ್ರಯದಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (SIR) ಕಾರ್ಯಕ್ರಮದ ಅಂಗವಾಗಿ ತಾಲ್ಲೂಕು ಪಂಚಾಯತ್ ಆವರಣದಲ್ಲಿ ಶುಕ್ರವಾರ ಬೈಕ್ ರ್ಯಾಲಿ ಹಮ್ಮಿಕೊಳ್ಳಲಾಯಿತು.

ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಮಂಜುನಾಥ ಜಾವೂರ್ ಅವರು ಬೈಕ್ ರ್ಯಾಲಿಗೆ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು. ನಂತರ ಮಾತನಾಡಿದ ಅವರು, "ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆಯು ಈಗಾಗಲೇ ಆರಂಭವಾಗಿದ್ದು, ತಾಲ್ಲೂಕಿನ ಗ್ರಾಮೀಣ ಪ್ರದೇಶದ ಪ್ರತಿಯೊಬ್ಬ ನಾಗರಿಕರು ನಮೂನೆ ಅರ್ಜಿಗಳನ್ನು ಭರ್ತಿ ಮಾಡಿ ಬಿ.ಎಲ್.ಒ (BLO) ಗಳಿಗೆ ಸಲ್ಲಿಸಬೇಕು" ಎಂದು ತಿಳಿಸಿದರು.

ತಾಲ್ಲೂಕು ಪಂಚಾಯತ್ ಆವರಣದಿಂದ ಪ್ರಾರಂಭಗೊಂಡ ಈ ರ್ಯಾಲಿಯು ನಗರದ ಪ್ರಮುಖ ಬೀದಿಗಳಾದ ತಹಶೀಲ್ ಕಚೇರಿ, ಬಸ್ ನಿಲ್ದಾಣ, ಮಾರುಕಟ್ಟೆ ಹಾಗೂ ಬಸವೇಶ್ವರ ವೃತ್ತದ ಮೂಲಕ ಸಾಗಿ ಪುನಃ ತಾಲ್ಲೂಕು ಪಂಚಾಯತ್ ವರೆಗೆ ಸಂಚರಿಸಿತು.

ರ್ಯಾಲಿಯಲ್ಲಿ ಪಾಲ್ಗೊಂಡಿದ್ದ ಸಿಬ್ಬಂದಿ ಮತದಾರರ ಪರಿಷ್ಕರಣೆಯ ಅರಿವು ಮೂಡಿಸುವ ಪೋಸ್ಟರ್‌ಗಳನ್ನು ಹಿಡಿದು, ಘೋಷಣೆಗಳನ್ನು ಕೂಗುವ ಮೂಲಕ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿದರು.

ಈ ಸಂದರ್ಭದಲ್ಲಿ ಸಹಾಯಕ ನಿರ್ದೇಶಕರು (ಪಂ.ರಾ.) ಬಸವರಾಜ ಹಟ್ಟಿ, ತಾಲ್ಲೂಕು ಯೋಜನಾಧಿಕಾರಿ ಚೆನ್ನವೀರಪ್ಪ, ಪಟ್ಟಣ ಪಂಚಾಯತ್ ಸಮುದಾಯ ಸಂಘಟನಾ ಅಧಿಕಾರಿ ಹಂಪಯ್ಯ ಪಾಟೀಲ್, ಕಂದಾಯ ನಿರೀಕ್ಷಕ (ಆರ್.ಐ.) ಗೋಪಾಲ, ಪಿ.ಡಿ.ಒ.ಗಳು, ಪಂಚಾಯತ್ ಕಾರ್ಯದರ್ಶಿಗಳು, ತಾಂತ್ರಿಕ ಸಂಯೋಜಕರು, ತಾಂತ್ರಿಕ ಸಹಾಯಕರು, ಐ.ಇ.ಸಿ. ಸಂಯೋಜಕರು, ರಾಜೀವ್ ಗಾಂಧಿ ಫೆಲೋ, ಕಂಪ್ಯೂಟರ್ ಆಪರೇಟರ್‌ಗಳು, ಕರವಸೂಲಿಗಾರರು, ಗ್ರಂಥಪಾಲಕರು, ಪಟ್ಟಣ ಪಂಚಾಯತ್ ಹಾಗೂ ತಾ.ಪಂ., ಗ್ರಾ.ಪಂ. ಸಿಬ್ಬಂದಿ ಮತ್ತು ಸಾರ್ವಜನಿಕರು ಭಾಗವಹಿಸಿದ್ದರು.

## ಬ್ಯಾಂಕಿನಿಂದ ಸಾಲ ಪಡೆದು ಮರುಪಾವತಿ ಮಾಡದ ವ್ಯಕ್ತಿಯ ಕಾರು ಜಪ್ತಿ

ಧೈರ್ಯದ ದಾರಿ




**ಮಾನ್ವಿ :** ಪಟ್ಟಣದ ಸಿವೀಲ್ ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯದ ಅವರಣದಲ್ಲಿ ಕರ್ನಾಟಕ ಗ್ರಾಮೀಣ ಬ್ಯಾಂಕ್ ಶಾಖೆ ಸಿರವಾರ ನಿಂದ ಕಡದಿನ್ನಿ ಗ್ರಾಮದ ಜೆ.ನರಸಪ್ಪ ಎನ್ನುವವರು ಸಾಲವನ್ನು ಪಡೆದು ಸಕಾಲದಲ್ಲಿ ಮರುಪಾವತಿ ಮಾಡದೆ ಇದ್ದುದರಿಂದ ಈ ಕುರಿತು ಕರ್ನಾಟಕ ಗ್ರಾಮೀಣ ಬ್ಯಾಂಕ್ ಶಾಖೆ ಸಿರವಾರ ವ್ಯವಸ್ಥಾಪಕರಾದ ವಿಜಯ ಕುಮಾರ್ ಮೇಟಿ ರವರು ಸಾಲಗಾರರ ವಿರುದ್ದ ದಾವೆ ಅರ್ಜಿ ಸಲ್ಲಿಸಿದ್ದರು ಅರ್ಜಿದಾರರ ಪರ ಸೈಯದ್ ತಾಹೇರ್ ಹುಸೇನಿ ಮತವಾಲೆ ವಕೀಲರು ಸಮರ್ಥವಾಗಿ ವಾದ ಮಂಡಿಸಿದರು ಈ ಕುರಿತು ಕಿರಿಯ ಶ್ರೇಣಿ ನ್ಯಾಯಾಧೀಶರಾದ ಆನಂದ ಹೆಚ್. ಕನ್ನೂರು ರವರು ಪ್ರಕರಣವನ್ನು ಪರಿಶೀಲಿಸಿ ಸಾಲ ಮರುಪಾವತಿಸದ ಕಡದಿನ್ನಿ ಗ್ರಾಮದ ಜೆ.ನರಸಪ್ಪ ಎನ್ನುವವರ ಕಾರು ಜಪ್ತಿ ಮಾಡುವಂತೆ ಅದೇಶ ನೀಡಿದ ಆನ್ವಯ ನ್ಯಾಯಾಲಯ ಸಿಬ್ಬದಿಗಳಾದ ನಂದಪ್ಪ, ಮಹ್ಮದ್ ಜಾನಿ ಹಾಗೂ ಪೋಲಿಸ್ ಸಿಬ್ಬಂದಿಗಳು ಕಾರನ್ನು ಜಪ್ತಿ ಮಾಡಿ ನ್ಯಾಯಾಲಯಕ್ಕೆ ಹಾಜರು ಪಡಿಸಿದ್ದಾರೆ ಎಂದು ಬ್ಯಾಂಕಿನ ಪರ ವಕೀಲರಾದ ಸೈಯದ್ ತಾಹೇರ್ ಹುಸೇನಿ ಮತವಾಲೆ ಮಾಹಿತಿ ನೀಡಿದರು.

ಕರ್ನಾಟಕ ಗ್ರಾಮೀಣ ಬ್ಯಾಂಕ್ ಸಿರವಾರ ವ್ಯವಸ್ಥಾಪಕರಾದ ವಿಜಯಕುಮಾರ್ ಮೇಟಿ, ನ್ಯಾಯಾಲಯ ಸಿಬ್ಬಂಧಿಗಳಾದ ನಂದಪ್ಪ, ಮಹ್ಮದ್ ಜಾನಿ ಸೇರಿದಂತೆ ಇನ್ನಿತರರು ಇದ್ದರು.

ಮೊದಲನೇ ಪುಟದಿಂದ

# ಕೆಪಿಎಮ್‌ಇ ಕಾಯ್ದೆ ಉಲ್ಲಂಘಿಸಿದರೆ ಎಫ್‌ಐಆರ್: ಜಿಲ್ಲಾಧಿಕಾರಿ ಪೂವಿತಾ ಎಸ್. ಎಚ್ಚರಿಕೆ

ಅಲ್ಲದೆ ಅಂತಹವರು ವಿರುದ್ಧ ಎಫ್‌ಐಆರ್ ದಾಖಲಿಸಲಾಗುವುದು ಜಿಲ್ಲಾಧಿಕಾರಿಗಳು ಎಚ್ಚರಿಕೆ ನೀಡಿದರು.

ಪ್ರಯೋಗಾಲಯಗಳ ವರದಿಯನ್ನು ಪೇಥಾಲಜಿಸ್ಟ್ ಅಥವಾ ಆಸ್ಪತ್ರೆಯ ಮುಖ್ಯ ವೈದ್ಯರ ಮೂಲಕ ಕಡ್ಡಾಯವಾಗಿ ದೃಢಪಡಿಸಿರಬೇಕು. ಜಿಲ್ಲೆಯಲ್ಲಿ ಸ್ವತಂತ್ರವಾಗಿ ಕಾರ್ಯನಿರ್ವಹಿಸುವ ರಕ್ತ ಪರೀಕ್ಷಾ ಕೇಂದ್ರಗಳು, ಪ್ರಯೋಗಾಲಯಗಳು, ಡಯಾಗ್ನೊಸ್ಟಿಕ್ಸ್ ಕೇಂದ್ರಗಳು ಕಡ್ಡಾಯವಾಗಿ ಕೆಪಿಎಮ್‌ಇ ಕಾಯ್ದೆಯಡಿ ನೋಂದಣಿ ಮಾಡಿಸಬೇಕು. ಮತ್ತು ಪ್ರಯೋಗಾಲಯದ ಪ್ರತಿ ವರದಿಗೂ ಪೇಥಾಲಜಿಸ್ಟ್ ಅವರ ದೃಢಿಕರಣವಾಗಿರಬೇಕು. ಮತ್ತು ಆಸ್ಪತ್ರೆ, ನರ್ಸಿಂಗ್ ಹೋಮ್‌ಗಳಲ್ಲಿ ರಕ್ತ ಪರೀಕ್ಷಾ ಕೇಂದ್ರಗಳು, ಪ್ರಯೋಗಾಲಯಗಳು, ಡಯಾಗ್ನೊಸ್ಟಿಕ್ಸ್ ಕೇಂದ್ರಗಳು ಇದ್ದಲ್ಲಿ ಪ್ರಯೋಗಾಲಯದ ಪ್ರತಿ ವರದಿಗೂ ಆಸ್ಪತ್ರೆಯ ಮುಖ್ಯ ವೈದ್ಯರು ದೃಢೀಕರಣ ಮಾಡಿರಬೇಕು. ಒಂದು ವೇಳೆ ನಿಯಮ ಮೀರಿದರೆ ಅಂತವರ ವಿರುದ್ಧ ಕೆಪಿಎಮ್‌ಇ ಕಾಯ್ದೆಯಡಿ ನಿಯಮಾನಯಸಾರ ಕ್ರಮ ಜರುಗಿಸಲಾಗುವುದು ಎಂದು ಜಿಲ್ಲಾಧಿಕಾರಿಗಳು ಹೇಳಿದರು.

ವೈದ್ಯರಿಂದ ಚೀಟಿ ತಂದರೆ ಮಾತ್ರ ಔಷಧಿ ವಿತರಿಸಿ: ಔಷಧಿಗಾಗಿ ಸಾರ್ವಜನಿಕರು ವೈದ್ಯರಿಂದ ಚೀಟಿ ತಂದರೆ ಮಾತ್ರ ಔಷಧಿ ವಿತರಿಸಬೇಕು. ಅದರಲ್ಲೂ ಗರ್ಭಪಾತ

ಸಂಭಂದಿತ ಔಷದಿಗಳನ್ನು ಕೊಟ್ಟಿರುವುದು ಪರಿಶೀಲನೆ ವೇಳೆ ನಿಯಮ ಮೀರಿದ್ದು, ಕಂಡು ಬಂದರೆ ಅಂತಹವರ ವಿರುದ್ಧ ನಿಯಮಾನುಸಾರ ಕ್ರಮ ಜರುಗಿಸಲಾಗುವುದು. ಜಿಲ್ಲೆಯಲ್ಲಿ ಸಾರ್ವಜನಿಕರ ಆರೋಗ್ಯದ ದೃಷ್ಟಿಯಿಂದ ವೈದ್ಯ ವೃತ್ತಿಯನ್ನು ಗೌರವದಿಂದ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಜಿಲ್ಲೆಯಲ್ಲಿ 20 ನಕಲಿ ವೈದ್ಯರ ವಿರುದ್ದ ಕ್ರಮ: ನಕಲಿ ವೈದ್ಯರು ಮತ್ತು ಕ್ಲಿನಿಕ್‌ಗಳ ವಿರುದ್ಧ ಗರಿಷ್ಠ ಪ್ರಮಾಣದ ದಂಡ ವಿಧಿಸಿ. ಕ್ಲಿನಿಕ್‌ಗಳನ್ನು ಮುಚ್ಚುವ ಜೊತೆಗೆ ಅಂತಹ ತಪ್ಪು ಮುಂದುವರಿಸುವವರ ವಿರುದ್ಧ ಪ್ರಕರಣ ದಾಖಳಿಸಲಾಗುವುದು. ಜಿಲ್ಲೆಯಲ್ಲಿ ಕಳೆದ 6 ತಿಂಗಳಿನಲ್ಲಿ 20ಮಂದಿ ನಕಲಿ ವೈದ್ಯರ ವಿರುದ್ದ ಕ್ರಮ ಕೈಗೊಂಡು, ಅವರ ಕ್ಲಿನಿಕ್‌ಗಳನ್ನು ಮುಚ್ಚಿಸಲಾಗಿದೆ. 2 ಲಕ್ಷದ 20 ಸಾವಿರ ದಂಡ ವಸೂಲು ಮಾಡಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ನಂದಿತಾ ಎಮ್.ಎನ್. ಅವರು ಸಭೆಗೆ ಮಾಹಿತಿ ನೀಡಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ವಿಜಯಶಂಕರ, ಕುಟುಂಬ ಕಲ್ಯಾಣ ಕಾರ್ಯಕ್ರಮ ಅಧಿಕಾರಿ ಡಾ.ಶಿವಕುಮಾರ್ ನಾರಾ, ಸಹಾಯಕ ಔಷಧಿ ನಿಯಂತ್ರಕರು ಸಚಿನ್, ಜಿಲ್ಲಾ ಅಯುಷ್ ಅಧಿಕಾರಿ ಡಾ.ಶಂಕರಗೌಡ, ಐಎಮ್‌ಎ ಅಧ್ಯಕ್ಷರಾದ ಡಾ.ಶೈಲೇಶ್ ಅಮರಕೇಡ್, ಡಿಎಸ್‌ಓ ಡಾ.ಗಣೇಶ್ ಕೆ., ಡಿಟಿಓ ಡಾ.ಯಶೋಧಾ, ಡಿಎಮ್‌ಓ ಡಾ.ಚಂದ್ರಶೇಖರಯ್ಯ ಸೇರಿದಂತೆ ಜಿಲ್ಲೆಯ ವಿವಿಧ ತಾಲೂಕಾ ಆರೋಗ್ಯಾಧಿಕಾರಿಗಳು, ಸಾರ್ವಜನಿಕ ಆಸ್ಪತ್ರೆ ಮುಖ್ಯ ಆಡಳಿತ ವೈದ್ಯಾಧಿಕಾರಿಗಳು, ಇತರೆ ಅಧಿಕಾರಿಗಳು ಸಭೆಯಲ್ಲಿ ಇದ್ದರು.

# ಪರೀಕ್ಷಾ ಅಕ್ರಮ ತಡೆ ಕಾಯ್ದೆಗೆ ಸಂಪುಟ ಅಂಕಿತ

ಪ್ರತಿಭಟನೆಯ ಬಿಸಿ ತಟ್ಟಿದ ಹಿನ್ನೆಲೆಯಲ್ಲಿ ನವದೆಹಲಿ ಮೆಟ್ರೋ ನಿಲ್ದಾಣ ಸೇರಿದಂತೆ ದೆಹಲಿಯ ಹಲವು ಮೆಟ್ರೋ ನಿಲ್ದಾಣಗಳ ಕಾರ್ಯಾಚರಣೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿತ್ತು.ದೇಶವ್ಯಾಪಿ ಪ್ರತಿಭಟನೆ ಹಾಗೂ ಮಾತುಕತೆ ವಿವರಅಭಿಜಿತ್ ದಿಪ್ಕೆ ನೇತೃತ್ವದ ಸಿಜೆಪಿ ಸಂಘಟನೆಯು ದೇಶದ ಎಲ್ಲಾ ಜಿಲ್ಲೆಗಳಲ್ಲಿ ಪ್ರತಿಭಟನೆ ನಡೆಸಲು ಕರೆ ನೀಡಿತ್ತು. ಪ್ರಧಾನಿ ನರೇಂದ್ರ ಮೋದಿ ಅವರು ಪ್ರಶ್ನೆಪತ್ರಿಕೆ ಸೋರಿಕೆ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದ್ದರೂ, ಹೊಣೆಗಾರಿಕೆ ಮತ್ತು ಶಿಕ್ಷಣ ಸಚಿವರ ರಾಜೀನಾಮೆ ವಿಷಯದಲ್ಲಿ ಸರ್ಕಾರ ಸ್ಪಷ್ಟತೆ ನೀಡಿಲ್ಲ ಎಂದು ಸಿಜೆಪಿ ಆರೋಪಿಸಿದೆ. ಧಾನ್ ರಾಜೀನಾಮೆ ಬೇಡಿಕೆ

ಶನಿವಾರದವರೆಗೆ ಕಾಲಾವಕಾಶ: ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆಗೆ ಆಗ್ರಹಿಸಿ ದೆಹಲಿಯ ಜಂತರ್ ಮಂತರ್‌ನಲ್ಲಿ ಕಾಕ್ರೋಚ್ ಜನತಾ ಪಾರ್ಟಿ ನಡೆಸುತ್ತಿರುವ ಪ್ರತಿಭಟನೆ ತೀವ್ರಗೊಂಡಿದೆ. ಈ ಕುರಿತು ಸಿಜೆಪಿ ಜೊತೆ ಮಾತುಕತೆ ನಡೆಸಿರುವ ಕೇಂದ್ರ ಸರ್ಕಾರವು ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆ ಬೇಡಿಕೆಗೆ ಪ್ರತಿಕ್ರಿಯಿಸಲು ಶನಿವಾರದವರೆಗೆ ಕಾಲಾವಕಾಶ ಕೋರಿದೆ ಎಂದು ಸಂಘಟನೆಯ ಪದಾಧಿಕಾರಿಗಳು ತಿಳಿಸಿದ್ದಾರೆ

ಪರಿಸ್ಥಿತಿ ಕೈಮೀರದಂತೆ ತಡೆಯಲು ಜಂತರ್ ಮಂತರ್ ಸುತ್ತಮುತ್ತಲಿನ 1.5 ಕಿ.ಮೀ ವ್ಯಾಪ್ತಿಯಲ್ಲಿ ಇಂಟರ್ನೆಟ್ ಸೇವೆಯನ್ನು ಶುಕ್ರವಾರ ಮಧ್ಯರಾತ್ರಿಯವರೆಗೆ ವಿಸ್ತರಿಸಿ ಆದೇಶಿಸಲಾಗಿದೆ.

# ಪ್ರತಿಭಟನಾಕಾರರ ಮೇಲಿನ ಲಾಠಿಚಾರ್ಜ್ ಖಂಡಿಸಿ ಕೇಂದ್ರ ಶಿಕ್ಷಣ ಸಚಿವರ ರಾಜೀನಾಮೆಗೆ ಆಗ್ರಹ



**ಬೀದರ, ಜು 24:** ನೀಟ್ ಪರೀಕ್ಷೆ ಪ್ರಶ್ನೆಪತ್ರಿಕೆ ಸೋರಿಕೆ ಸೇರಿದಂತೆ ದೇಶದ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿನ ಅವ್ಯವಸ್ಥೆಯನ್ನು ಖಂಡಿಸಿ ಹಾಗೂ ಕೇಂದ್ರ ಶಿಕ್ಷಣ ಸಚಿವ ಧಮೇರ್ಂದ್ರ ಪ್ರಧಾನ ಅವರು ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ (ಅಂಬೇಡ್ಕರ್‌ವಾದ) ವತಿಯಿಂದ ಗುರುವಾರ ನಗರದ ಅಂಬೇಡ್ಕರ್ ವೃತ್ತದಲ್ಲಿ ಧರಣಿ ಸತ್ಯಾಗ್ರಹ ನಡೆಸಲಾಯಿತು. ಬಳಿಕ ಜಿಲ್ಲಾಧಿಕಾರಿಗಳ ಮೂಲಕ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಗೆ ಮನವಿ ಸಲ್ಲಿಸಲಾಯಿತು.

ಪ್ರತಿಭಟನಾಕಾರರು ಮಾತನಾಡಿ, ದೇಶದ ಪರೀಕ್ಷಾ ವ್ಯವಸ್ಥೆಯಲ್ಲಿ ಹೆಚ್ಚುತ್ತಿರುವ ಅವ್ಯವಸ್ಥೆಗಳು ವಿದ್ಯಾರ್ಥಿಗಳ ಭವಿಷ್ಯವನ್ನು ಆತಂಕಕ್ಕೆ ದೂಡುತ್ತಿವೆ. ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಸೇರಿದಂತೆ ವಿವಿಧ ಪರೀಕ್ಷಾ ಅಕ್ರಮಗಳಿಗೆ ಕೇಂದ್ರ ಸರ್ಕಾರ ನೈತಿಕ ಹೊಣೆ ಹೊತ್ತು ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.ದೇಶದ ಪರೀಕ್ಷಾ ವ್ಯವಸ್ಥೆಯನ್ನು ಸಂಪೂರ್ಣವಾಗಿ ಸುಧಾರಿಸಬೇಕು. ನೀಟ್ ಸೇರಿದಂತೆ ವಿವಿಧ ಪರೀಕ್ಷೆಗಳಲ್ಲಿನ ಅಕ್ರಮಗಳಿಗೆ ನೈತಿಕ ಹೊಣೆ ಹೊತ್ತು ಕೇಂದ್ರ ಶಿಕ್ಷಣ ಸಚಿವ ಧಮೇರ್ಂದ್ರ ಪ್ರಧಾನ ಅವರು ರಾಜೀನಾಮೆ ನೀಡಬೇಕು. ಇಲ್ಲವಾದಲ್ಲಿ ಅವರನ್ನು ಸಚಿವ ಸಂಪುಟದಿಂದ ವಜಾಗೊಳಿಸಬೇಕು ಎಂದು ಆಗ್ರಹಿಸಿದರು.

ದೆಹಲಿ ಜಂತರ್–ಮಂತ್ರನಲ್ಲಿ ಸೋನಮ್ ವಾಂಗ್ಚುಕ್ ಅವರ ನೇತೃತ್ವದಲ್ಲಿ ನಡೆಯುತ್ತಿರುವ ಉಪವಾಸ ಸತ್ಯಾಗ್ರಹಕ್ಕೆ ಬೆಂಬಲ ವ್ಯಕ್ತಪಡಿಸಿದ ಪ್ರತಿಭಟನಾಕಾರರು, ಶಾಂತಿಯುತವಾಗಿ ಪ್ರತಿಭಟನೆ ನಡೆಸುತ್ತಿದ್ದ ವಿದ್ಯಾರ್ಥಿಗಳ ಮೇಲೆ ಲಾಠಿಚಾರ್ಜ್ ಹಾಗೂ ಟಿಯರ್ ಗ್ಯಾಸ್ ಪ್ರಯೋಗಿಸಿರುವುದನ್ನು ತೀವ್ರವಾಗಿ ಖಂಡಿಸಿದರು. ಪರೀಕ್ಷಾ ಅಕ್ರಮಗಳಿಂದ ಸಂಕಷ್ಟಕ್ಕೊಳಗಾದ ವಿದ್ಯಾರ್ಥಿಗಳಿಗೆ ನ್ಯಾಯ ದೊರಕಿಸಿಕೊಡಬೇಕು ಹಾಗೂ ಜೀವ ಕಳೆದುಕೊಂಡ ವಿದ್ಯಾರ್ಥಿಗಳ ಕುಟುಂಬಗಳಿಗೆ ಸೂಕ್ತ ಪರಿಹಾರ ನೀಡಬೇಕು ಎಂದು ಒತ್ತಾಯಿಸಿದರು.

ಶಾಂತಿಯುತ ಪ್ರತಿಭಟನಾಕಾರರ ವಿರುದ್ಧ ಪ್ರಕರಣ ದಾಖಲಿಸಿರುವುದು ಪ್ರಜಾಪ್ರಭುತ್ವದ ಮೌಲ್ಯಗಳಿಗೆ ವಿರುದ್ಧವಾಗಿದೆ ಎಂದು ಆರೋಪಿಸಿದ ಅವರು, ನ್ಯಾಯ ಸಿಗುವವರೆಗೆ ಶಾಂತಿಯುತ ಹೋರಾಟವನ್ನು ಮುಂದುವರಿಸುವುದಾಗಿ ತಿಳಿಸಿದರು. ಜನರ ಹಕ್ಕುಗಳಿಗೆ ಗೌರವ ಸಿಗಬೇಕು ಹಾಗೂ ಜನಪ್ರತಿನಿಧಿಗಳು ಜನರ ಆಶಂಯಗಳಿಗೆ ಉತ್ತರದಾಯಕರಾಗಿರಬೇಕು ಎಂದು ಅಭಿಪ್ರಾಯಪಟ್ಟರು.

ಬೇಡಿಕೆಗಳು

ಕೇಂದ್ರ ಶಿಕ್ಷಣ ಸಚಿವ ಧಮೇರ್ಂದ್ರ ಪ್ರಧಾನ ಅವರು ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕು.ದೇಶದ ಪರೀಕ್ಷಾ ವ್ಯವಸ್ಥೆಯಲ್ಲಿನ ಅವ್ಯವಸ್ಥೆಯನ್ನು ಸಂಪೂರ್ಣವಾಗಿ ಸರಿಪಡಿಸಬೇಕು.ವಿದ್ಯಾರ್ಥಿಗಳ ಮೇಲಿನ ಲಾಠಿಚಾರ್ಜ್ ಹಾಗೂ ಟಿಯರ್ ಗ್ಯಾಸ್ ಪ್ರಯೋಗ ನಡೆಸಿದವರ ವಿರುದ್ಧ ಕ್ರಮ ಕೈಗೊಳ್ಳಬೇಕು.ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದಿಂದ ಹಾನಿಗೊಳಗಾದ ಹಾಗೂ ಜೀವ ಕಳೆದುಕೊಂಡ ವಿದ್ಯಾರ್ಥಿಗಳ ಕುಟುಂಬಗಳಿಗೆ ಸೂಕ್ತ ಪರಿಹಾರ ನೀಡಬೇಕು.

ಪ್ರತಿಭಟನೆಯಲ್ಲಿ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿಯ **ರಾಜ್ಯ ಸಂಚಾಲಕ ಮಾರುತಿ ಬೌದ್ಧೆ, ಜಿಲ್ಲಾ ಸಂಚಾಲಕರಾದ ರಾಜಕುಮಾರ ವಾಘಮಾರೆ ಹಾಗೂ ಅರುಣ ಪಟೇಲ್, ತಾಲ್ಲೂಕು ಸಂಚಾಲಕರಾದ ಝರೆಪ್ಪಾ ವರ್ಮಾ (ಔರಾದ) ಮತ್ತು ವಾಮನರಾವ್ ಮೈಸಲಗೆ (ಬಸವಕಲ್ಯಾಣ), ದಲಿತ ಕಲಾ ಮಂಡಳಿ ಜಿಲ್ಲಾ ಸಂಚಾಲಕ ಶಿವರಾಜ ತಡಪಳ್ಳಿ, ಶಿರೋಮಣಿ ಹಲಗೆ, ಸತೀಶ್ ರತ್ನಾಕರ್, ರಮೇಶ್ ಬೆಲ್ದಾರ್, ಉದಯ ನಾಯಕ್, ವಿಜಯಕುಮಾರ್ ಭಾವಿಕಟ್ಟಿ, ರಾಹುಲ್ ಹಾಳಹಿಪ್ಪರಗಾ, ಮಹೇಶ್ ಗೋರನಾಳ್ಕರ್, ಬಾಬುರಾವ ಹೊನ್ನಾ, ಮುಕೇಶ್ ರಾಯ್, ವಿನೋದ್ ಭಂಗೆ, ಬಸವರಾಜ್ ಭಾವಿದೊಡ್ಡಿ, ಗೌತಮ್ ಉತ್ತಂಗಿಕರ್, ರಾಜು ಕಾಂಬಳೆ, ಜಯಭೀಮ್ ಚೀಮನಾಯಕ್, ಶ್ರೀನಿವಾಸ್ ದಯಾಳ್, ವಿನಯ್ ಮಾಳಗೆ, ಬಾಬು ಟೈಗರ್, ಓಂಪ್ರಕಾಶ್ ರೊಟ್ಟೆ, ಜಗದೀಶ್ ಬಿರಾದಾರ್, ವಿಠ್ಠಲದಾಸ್ ಪ್ಯಾಗೆ, ದಶರಥ್ ಗುರು, ರಮೇಶ್ ಜಿ. ಉಮಾಪುರೆ, ಉತ್ತಮ್ ಮಾಂಜರೇಕರ್, ಮಲ್ಲಿಕಾರ್ಜುನ ಮಾಲೆ, ಸಚಿನ್ ಭೀಮನಗರ, ನಸಿರ್‌ಂಗ್ ನವದಗೇರಿ, ಸುಧಾಮಣಿ, ಮಾಯಾವತಿ, ಆಕಾಂಕ್ಷಿ, ಭಾಗ್ಯಜ್ಯೋತಿ ಸೇರಿದಂತೆ ಅನೇಕ ಮುಖಂಡರು, ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಪ್ಲೆನೇರಿಯಾ– ಪ್ರಕೃತಿಯ ಅಚ್ಚರಿಯ ಜೀವಿ




ಇಂದು ನಾನು ಪ್ರಕೃತಿಯ ಒಂದು ಅದ್ಭುತ ಜೀವಿಯಾದ ಪ್ಲೆನೇರಿಯಾ (Planaria) ಬಗ್ಗೆ ಒಂದು ಅಚ್ಚರಿಯ ಸಂಗತಿಯನ್ನು ನಿಮ್ಮೊಂದಿಗೆ ಹಂಚಿಕೊಳ್ಳಲು ಬಯಸುತ್ತೇನೆ.

ಪ್ಲೆನೇರಿಯಾ ಸಿಹಿನೀರಿನಲ್ಲಿ ವಾಸಿಸುವ ಚಪ್ಪಟೆ ಹುಳು (Flatworm) ಆಗಿದ್ದು, ಇದು Platyhelminthes ಸಂಘಕ್ಕೆ ಸೇರಿದೆ. ಈ ಜೀವಿಯ ಅತ್ಯಂತ ವಿಶೇಷವಾದ ಗುಣವೆಂದರೆ ಅದರ ಅದ್ಭುತ ಪುನರುತ್ಪತ್ತಿ (Regeneration) ಸಾಮರ್ಥ್ಯ.

ಪ್ಲೆನೇರಿಯಾದ ಪ್ರಮುಖ ಲಕ್ಷಣಗಳು:

– ಸಿಹಿನೀರಿನ ಕೊಳಗಳು, ಕೆರೆಗಳು ಮತ್ತು ಹೊಳೆಗಳಲ್ಲಿ ಕಂಡುಬರುತ್ತದೆ.
– ಇದರ ದೇಹ ಚಪ್ಪಟೆ, ಮೃದುವಾಗಿದ್ದು ಉದ್ದವಾಗಿರುತ್ತದೆ.
– ತಲೆಯ ಭಾಗದಲ್ಲಿ ಎರಡು ಕಣ್ಣಿನಂತಿರುವ ಕಪ್ಪು ಚುಕ್ಕೆಗಳು ಇರುತ್ತವೆ.
– ಸಣ್ಣ ಕೀಟಗಳು ಮತ್ತು ಇತರ ಸೂಕ್ಷ್ಮ ಜೀವಿಗಳನ್ನು ಆಹಾರವಾಗಿ ಸೇವಿಸುತ್ತದೆ.
– ಇದರ ದೇಹವನ್ನು ಹಲವು ತುಂಡುಗಳಾಗಿ ಕತ್ತರಿಸಿದರೂ, ಪ್ರತಿಯೊಂದು ತುಂಡಿನಿಂದಲೂ ಹೊಸ ಸಂಪೂರ್ಣ ಪ್ಲೆನೇರಿಯಾ ಬೆಳೆಯುವ ಅದ್ಭುತ ಸಾಮರ್ಥ್ಯ ಹೊಂದಿದೆ.
– ಈ ಪುನರುತ್ಪತ್ತಿಗೆ ಅದರ ದೇಹದಲ್ಲಿರುವ ನಿಯೋಬ್ಲಾಸ್ಟ್‌ಗಳು (Neoblasts) ಎಂಬ ವಿಶೇಷ ಸ್ಟೆಮ್ ಕೋಶಗಳು (Stem Cells) ಕಾರಣವಾಗುತ್ತವೆ.

ಪ್ರಕೃತಿಯ ಸಂದೇಶ:

ಒಂದು ಸಣ್ಣ ಜೀವಿಯೂ ನಮಗೆ ದೊಡ್ಡ ಪಾಠ ಕಲಿಸುತ್ತದೆ. ಎಷ್ಟೇ ಸಂಕಷ್ಟಗಳು ನಮ್ಮನ್ನು ಒಡೆಯಲು ಪ್ರಯತ್ನಿಸಿದರೂ, ಮತ್ತೆ ಎದ್ದು ನಿಲ್ಲುವ ಶಕ್ತಿ ನಮ್ಮೊಳಗೇ ಇದೆ ಎಂಬುದನ್ನು ಪ್ಲೆನೇರಿಯಾ ತನ್ನ ಬದುಕಿನ ಮೂಲಕ ಸಾರುತ್ತದೆ.




–ಲೇಖನ:ಗಂಗಾ

# ಗ್ಯಾರಂಟಿ ಸೌಲಭ್ಯ ಪಡೆಯಲು ತಾಂತ್ರಿಕ ಸಮಸ್ಯೆ ತಕ್ಷಣ ಪರಿಹರಿಸಿ:ಚಂದ್ರಿಕಾ ಪರಮೇಶ್ವರ್



**ಕಲಬುರಗಿ,ಜು.24:**ಜಿಲ್ಲೆಯಲ್ಲಿ ಸಾರ್ವಜನಿಕರಿಗೆ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಸೌಲಭ್ಯ ಪಡೆಯಲು ಯಾವುದೇ ಗೊಂದಲ ಇರಬಾರದು. ತಾಂತ್ರಿಕ ಸಮಸ್ಯೆಗಳಿದ್ದಲ್ಲಿ ಅವುಗಳನ್ನು ತಕ್ಷಣ ಪರಿಹರಿಸಬೇಕೆಂದು ಅಧಿಕಾರಿಗಳಿಗೆ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷೆ ಚಂದ್ರಿಕಾ ಪರಮೇಶ್ವರ್ ಸೂಚನೆ ನೀಡಿದರು.

ಗುರುವಾರ ನಗರದ ಜಿಲ್ಲಾ ಪಂಚಾಯತ್ ಹೊಸ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಪಂಚ ಗ್ಯಾರೆಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿ ಅವರು, ವಿಶೇಷವಾಗಿ ಗೃಹ ಲಕ್ಷ್ಮೀ ಯೋಜನೆಯಡಿ ತಾಂತ್ರಿಕ ತೊಂದರೆಯಿಂದ ಮಹಿಳೆಯರಿಗೆ ಹಣ ತಲುಪದಿದ್ದರೆ ಅಂತಹ ಫಲಾನುಭವಿಗಳು ಅಗತ್ಯ ದಾಖಲೆಗಳೊಂದಿಗೆ ತಾಲೂಕಿನ ಸಿ.ಡಿ.ಪಿ.ಓ ಕಚೇರಿಯನ್ನು ಸಂಪರ್ಕಿಸಬೇಕೆಂದು ಫಲಾನುಭವಿಗಳಿಗೆ ಜಾಗೃತಿ ಮೂಡಿಸಬೇಕೆಂದು ಸಭೆಯಲ್ಲಿದ್ದ ಅಧಿಕಾರಿಗಳಿಗೆ ಅಧ್ಯಕ್ಷರು ನಿರ್ದೇಶನ ನೀಡಿದರು.

ಸರ್ಕಾರದ ಈ ಯಾವುದೇ ಗ್ಯಾರಂಟಿ ಯೋಜನೆಗಳ ಅನುದಾನದ ಹಣವನ್ನು ಬ್ಯಾಂಕ್‌ಗಳು ಫಲಾನುಭವಿಗಳ ಹಳೆಯ ಸಾಲಕ್ಕೆ ಜಮೆ ಮಾಡಿಕೊಳ್ಳಬಾರದು. ಬ್ಯಾಂಕ್ ಸಿಬ್ಬಂದಿ ಸಾರ್ವಜನಿಕರೊಂದಿಗೆ ಕಡ್ಡಾಯವಾಗಿ ಸ್ಥಳೀಯ ಭಾಷೆಯಲ್ಲೇ ವ್ಯವಹರಿಸಬೇಕು ಎಂದು ಬ್ಯಾಂಕ್ ಅಧಿಕಾರಿಗಳಿಗೆ ಚಂದ್ರಿಕಾ ಪರಮೇಶ್ವರ್ ಸೂಚನೆ ನೀಡಿದರು.

ರಾಜ್ಯ ಸರ್ಕಾರದ ಅತ್ಯಂತ ಮಹತ್ವಾಕಾಂಕ್ಷೆಯ ಗೃಹಲಕ್ಷ್ಮಿ ಯೋಜನೆಯಡಿ ಕಲಬುರಗಿ ಜಿಲ್ಲೆಯಲ್ಲಿ ಒಟ್ಟು 5,97,166 ನೋಂದಾಯಿತ ಮಹಿಳಾ ಫಲಾನುಭವಿಗಳಿದ್ದು, 2023–24ರಲ್ಲಿ 782.64 ಕೋಟಿ ರೂ. 2024–25ರಲ್ಲಿ 1,044.48 ಕೋಟಿ ರೂ. ಹಾಗೂ 2025–26ರಲ್ಲಿ 1,077.88 ಕೋಟಿ ರೂ. ಹಾಗೂ 2026–27 ಪ್ರಸ್ತುತ ಸಾಲಿನಲ್ಲಿ ಏಪ್ರಿಲ್ ವರೆಗೆ 1,133.76 ಕೋಟಿ ರೂ. ಸೇರಿದಂತೆ ಒಟ್ಟಾರೆ ಯೋಜನೆಯಡಿ ಜಿಲ್ಲೆಯಲ್ಲಿ ಇಲ್ಲಿಯುವರೆಗೆ 3,018.39 ಕೋಟಿ ರೂ. ಅನುದಾನ ಫಲಾನುಭವಿಗಳ ಖಾತೆಗೆ ಯಶಸ್ವಿಯಾಗಿ ಜಮೆಯಾಗಿದೆ. ಇದರಿಂದ ಸಾಮಾನ್ಯ, ಹಿಂದುಳಿದ ವರ್ಗ, ಅಲ್ಪಸಂಖ್ಯಾತ ಹಾಗೂ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಲಕ್ಷಾಂತರ ಮಹಿಳೆಯರ ಆರ್ಥಿಕ ಸಬಲೀಕರಣಕ್ಕೆ ಹೊಸನಾಂದಿ ಹಾಡಲಾಗಿದೆ ಎಂದರು.

ಜಿಲ್ಲಾ ಪಂಚಾಯತ್ ಸಿ.ಇ.ಓ ರಾಹುಲ ಎಸ್. ಸಂಕನೂರ ಅವರು ಮಾತನಾಡಿ, ಗೃಹ ಲಕ್ಷ್ಮೀ ಯೋಜನೆ ಅನರ್ಹರ ಪಾಲಾಗದಂತೆ ತಡೆಯಲು ಪತ್ತೆ ಹಚ್ಚುವ ಕೆಲಸ ನಡೆಯುತ್ತಿದೆ. ಜಿಲ್ಲೆಯಲ್ಲಿ ಗುರುತಿಸಲಾದ 9,156 ಮೃತ ಫಲಾನುಭವಿಗಳ ಪೈಕಿ 3,820 ಖಾತೆಗಳಿಗೆ ತಪ್ಪಾಗಿ ಜಮೆಯಾಗಿದ್ದ ಹಣವನ್ನು ಲೀಡ್ ಬ್ಯಾಂಕ್‌ಗಳ ಸಹಯೋಗದೊಂದಿಗೆ ಈಗಾಗಲೇ 44.34 ಲಕ್ಷ ಹಣವನ್ನು ವಸೂಲಿಮಾಡಿ ಸರ್ಕಾರಕ್ಕೆ ಜಮೆ ಮಾಡಲಾಗಿದೆ. ಉಳಿದ ಹಣ ಮರುಪಾವತಿ ಪ್ರಕ್ರಿಯೆಯಲ್ಲಿದೆ. ಶೀಘ್ರದಲ್ಲೇ ಸಿಬ್ಬಂದಿಗಳು ಮನೆ ಮನೆಗೆ ಭೇಟಿ ನೀಡಿ ವಿಶೇಷ ಅಪ್ ಹಾಗೂ ಬಯೋಮೆಟ್ರಿಕ್ ಮೂಲಕ ಮರು ಪರಿಶೀಲನೆ ನಡೆಸಬೇಕು ಎಂದು ಅಧಿಕಾರಿಗಳಿಗೆ ಹೇಳಿದರು. ಮತ್ತೊಂದೆಡೆ 'ಗೃಹಜ್ಯೋತಿ' ಯೋಜನೆಯಡಿ 5.86 ಲಕ್ಷಕ್ಕೂ ಹೆಚ್ಚು ಗ್ರಾಹಕರು ನೋಂದಾಯಿಸಿಕೊಂಡಿದ್ದು, ವಿದ್ಯುತ್ ಬಿಲ್‌ನಲ್ಲಿ ಹೆಚ್ಚಿನ ಮೊತ್ತ ಬರುತ್ತಿರುವ ಸಾರ್ವಜನಿಕರ ಗೊಂದಲ ನಿವಾರಿಸಲು ಜೆಸ್ಕಾಂ ಇಲಾಖೆಯಿಂದ ವಿಶೇಷ ಪರಿಶೀಲನಾ ತಂಡಗಳನ್ನು ರಚಿಸಲಾಗಿದೆ. ಈ ತಂಡಗಳು ಮನೆ ಬಾಗಿಲಿಗೆ ತೆರಳಿ ಪ್ರತಿದಿನ ಸುಮಾರು 3,000 ಅರ್ಜಿಗಳನ್ನು ಇತ್ಯರ್ಥಪಡಿಸುತ್ತಿವೆ. ಕಳೆದ 1 ವರ್ಷದ ಸರಾಸರಿ ಬಳಕೆಗಿಂತ ಹೆಚ್ಚಿನ ಬಳಕೆ ಇದ್ದರೆ ಅಥವಾ ಹಳೆಯ ಬಿಲ್ ಬಾಕಿ ಇದ್ದರೆ ಮಾತ್ರ ಹೆಚ್ಚುವರಿ ಮೊತ್ತ ಪಾವತಿಸಬೇಕಾಗಿದ್ದು, ಹಳೆಯ ಬಾಕಿಗೆ ಕಂತುಗಳ ಸೌಲಭ್ಯ ನೀಡಲಾಗಿದೆ. ಪ್ರತೀ ಏರಿಯಾದ ಲೈನ್ ಮ್ಯಾನ್ ಹಾಗೂ ಸಿಬ್ಬಂದಿಗಳನ್ನೊಳಗೊಂಡ ವಾಟ್ಸಾಪ್ ಗ್ರೂಪ್‌ಗಳನ್ನು ರಚಿಸಲಾಗಿದ್ದು, ಸಾರ್ವಜನಿಕರು ನೇರವಾಗಿ ಸಂಪರ್ಕಿಸಬಹುದು ಎಂದು ಜೆಸ್ಕಾಂ ಅಧಿಕಾರಿಗಳು ಸಭೆಗೆ ತಿಳಿಸಿದರು.

ಯುವನಿಧಿ ಯೋಜನೆಯಲ್ಲಿ ಕಲಬುರಗಿ ಜಿಲ್ಲೆ ರಾಜ್ಯದಲ್ಲೇ ಎರಡನೇ ಸ್ಥಾನ: ಯುವನಿಧಿ' ಯೋಜನೆಯಡಿ ಜಿಲ್ಲೆಯ 31,807ಕ್ಕೂ ಹೆಚ್ಚು ನಿರುದ್ಯೋಗಿ ಯುವಜನರು ನೊಂದಣಿ ಮಾಡಿಕೊಂಡಿದು, ಕಲಬುರಗಿ ಇಡೀ ರಾಜ್ಯದಲ್ಲೇ ಎರಡನೇ ಸ್ಥಾನದಲ್ಲಿದೆ. ನಿರುದ್ಯೋಗಿ ಯುವಕರು ಪ್ರತಿ ತಿಂಗಳು ಕಡ್ಡಾಯವಾಗಿ ಸ್ವಯಂ ಘೋಷಣೆ ಸಲ್ಲಿಸುವ ಮೂಲಕ ಭತ್ಯೆಯ ಜೊತೆಗೆ ಸರ್ಕಾರದ 'ಯುವನಿಧಿ ಪ್ಲಸ್' ಉಚಿತ ಕೌಶಲ್ಯಾಭಿವೃದ್ಧಿ ತರಬೇತಿಯ ಪ್ರಯೋಜನ ಪಡೆಯಬಹುದಾಗಿದೆ ಎಂದು ಕೌಶಲ್ಯಾಭಿವೃದ್ಧಿ ಅಧಿಕಾರಿಗಳು ವಿವರ ನೀಡಿದರು.

ಶಕ್ತಿ ಯೋಜನೆಯಡಿ ಜಿಲ್ಲೆಯಲ್ಲಿ 22 ಕೋಟಿಗೂ ಹೆಚ್ಚು ಮಹಿಳಾ ಪ್ರಯಾಣಿಕರು ಉಚಿತ ಪ್ರಯಾಣ ಮಾಡಿದ್ದಾರೆ. ಸಾರ್ವಜನಿಕರು ಹಾಗೂ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಸಾರಿಗೆ ಸಂಸ್ಥೆಯು ಬಸ್‌ಗಳ ಸಂಖ್ಯೆಯನ್ನು ಹೆಚ್ಚಿಸಿದೆ ಎಂದಿ ಸಾರಿಗೆ ಅಧಿಕಾರಿಗಳು ತಿಳಿಸಿದರು.

ಅನ್ನಭಾಗ್ಯ ಚರ್ಚೆಯ ಸಂದರ್ಭದಲ್ಲಿ ಯೋಜನೆಯಡಿ ನೀಡುವ ಉಚಿತ ಅಕ್ಕಿ ಕಾಳಸಂತೆಯಲ್ಲಿ ಮಾರಾಟ ಮಾಡುವ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿದ ಅಧ್ಯಕ್ಷರು ಪಡಿತರ ಅಕ್ಕಿ ಕಾಳಸಂತೆಯಲ್ಲಿ ಮಾರಾಟವಾದದಲ್ಲಿ ಲೋಪವೆಸಗುವ ನ್ಯಾಯಬೆಲೆ ಅಂಗಡಿಗಳನ್ನು ತಕ್ಷಣವೇ ಅಮಾನತುಗೊಳಿಸಲು ಸೂಚಿಸಿದರು. ಅಧಿಕಾರಿಗಳು ಕಡ್ಡಾಯವಾಗಿ ಸ್ಥಳ ತಪಾಸಣೆ ನಡೆಸಬೇಕು ಹಾಗೂ ಪ್ರತಿಯೊಂದು ಅಂಗಡಿಯ ಮುಂಭಾಗದಲ್ಲಿ ದೂರು ಸಲ್ಲಿಕೆಯ ಸಹಾಯವಾಣಿ ಸಂಖ್ಯೆಯನ್ನು ಪ್ರದರ್ಶಿಸಬೇಕೆಂದು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಸಭೆಯಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರುಗಳಾದ ಸೋಮಶೇಖರ ಹಿರೇಮಠ, ವಿಜಯಕುಮಾರ ಕಟ್ಟಿಮನಿ, ನಿರ್ಮಲಾ ಬರ್ಗಲಿ, ಸುರೇಶ ತಿಪ್ಪಶೆಟ್ಟಿ, ನರಸಿಂಹಲು ಕುಂಬಾರ ಸೇರಿದಂತೆ ಜಿಲ್ಲಾ ಸಮಿತಿ ಸದಸ್ಯರು, ತಾಲೂಕಿನ ಅಧ್ಯಕ್ಷರು–ಉಪಾಧ್ಯಕ್ಷರು ಹಾಗೂ ಜಿಲ್ಲಾ ಪಂಚಾಯತ್ ಸಿ.ಪಿ.ಓ ಮಧುಮತಿ ಹೊಸಮನಿ ಉಪಸ್ಥಿತರಿದ್ದರು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
6360866626

# ಸಾಮಾಜಿಕ ಭದ್ರತಾ ವೇತನ ಸ್ಥಗಿತ: ಬಡವರ ಬದುಕಿನ ಮೇಲೆ ಕಾಂಗ್ರೆಸ್ ಸರ್ಕಾರದ ಪ್ರಹಾರ



**ಬೀದರ್:** ಕಾಂಗ್ರೆಸ್ ಸರ್ಕಾರದ ಅವೈಜ್ಞಾನಿಕ ಹಾಗೂ ಜನವಿರೋಧಿ ನೀತಿಗಳ ಪರಿಣಾಮವಾಗಿ ಬೀದರ್ ಜಿಲ್ಲೆಯ ಸಾವಿರಾರು ಬಡ ಕುಟುಂಬಗಳು ಸಂಕಷ್ಟಕ್ಕೆ ಸಿಲುಕಿವೆ. ವೃದ್ಧಾಪ್ಯ ವೇತನ, ವಿಧವಾ ವೇತನ, ಅಂಗವಿಕಲರ ವೇತನ ಸೇರಿದಂತೆ ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳಡಿ 82,812 ಫಲಾನುಭವಿಗಳ ವೇತನವನ್ನು ಸ್ಥಗಿತಗೊಳಿಸಿರುವುದು ಅತ್ಯಂತ ಖಂಡನೀಯ ಎಂದು ಬೀದರ್ ದಕ್ಷಿಣ ಕ್ಷೇತ್ರದ ಶಾಸಕ ಹಾಗೂ ಬಿಜೆಪಿ ರಾಜ್ಯ ಕಾರ್ಯದರ್ಶಿ ಡಾ. ಶೈಲೇಂದ್ರ ಬೆಲ್ದಾಳೆ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು.

ಜಿಲ್ಲಾ ಆಡಳಿತದ ಅಧಿಕೃತ ಅಂಕಿಅಂಶಗಳ ಪ್ರಕಾರ, ಜಿಲ್ಲೆಯಲ್ಲಿ 1,18,081 ಅನುಮಾನಾಸ್ಪದ ಪ್ರಕರಣಗಳು ಗುರುತಿಸಲಾಗಿದ್ದು, ಅವುಗಳಲ್ಲಿ 95,863 ಪ್ರಕರಣಗಳ ಪರಿಶೀಲನೆ ಪೂರ್ಣಗೊಂಡಿದೆ. ಈ ಪೈಕಿ 14,002 ಪ್ರಕರಣಗಳನ್ನು ಮುಂದುವರಿಸಲಾಗಿದ್ದು, 82,812 ಪ್ರಕರಣಗಳ ವೇತನ ಸ್ಥಗಿತಗೊಳಿಸಲಾಗಿದೆ. ಇನ್ನೂ 21,267 ಪ್ರಕರಣಗಳ ಪರಿಶೀಲನೆ ಬಾಕಿ ಇದ್ದರೂ, ಸೂಕ್ತ ಪರಿಶೀಲನೆ ಪೂರ್ಣಗೊಳ್ಳುವ ಮೊದಲೇ ಸಾವಿರಾರು ಫಲಾನುಭವಿಗಳ ವೇತನ ಸ್ಥಗಿತಗೊಳಿಸಿರುವುದು ಸರ್ಕಾರದ ಆಡಳಿತ ವೈಫಲ್ಯಕ್ಕೆ ಸಾಕ್ಷಿಯಾಗಿದೆ ಎಂದು ಅವರು ಹೇಳಿದರು.

ಸರ್ಕಾರ ಜಾರಿಗೆ ತಂದಿರುವ ವಾರ್ಷಿಕ 32 ಸಾವಿರ ಆದಾಯ ಪ್ರಮಾಣಪತ್ರ ಕಡ್ಡಾಯ ನಿಯಮವೇ ಈ ಸಮಸ್ಯೆಗೆ ಮೂಲ ಕಾರಣವಾಗಿದೆ. ಗ್ರಾಮೀಣ ಭಾಗದ ಬಡವರು, ಹಿರಿಯ ನಾಗರಿಕರು, ವಿಧವೆಯರು ಹಾಗೂ ಅಂಗವಿಕಲರು ಆದಾಯ ಪ್ರಮಾಣಪತ್ರ ಪಡೆಯಲು ತಹಶೀಲ್ದಾರ್ ಕಚೇರಿ ಹಾಗೂ ನಾಡಕಚೇರಿಗಳಿಗೆ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ವಯಸ್ಸಾದವರು, ಅಂಗವಿಕಲರು ಹಾಗೂ ಅನಾರೋಗ್ಯದಿಂದ ಬಳಲುತ್ತಿರುವವರಿಗೆ ಈ ಪ್ರಕ್ರಿಯೆ ಮತ್ತಷ್ಟು ಸಂಕಷ್ಟ ಉಂಟುಮಾಡಿದೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

ಈ ಹಿಂದೆ ಬಿಪಿಎಲ್ ಪಡಿತರ ಚೀಟಿ ಹೊಂದಿದ್ದವರನ್ನು ಅರ್ಹರೆಂದು ಪರಿಗಣಿಸಿ ಸಾಮಾಜಿಕ ಭದ್ರತಾ ವೇತನ ನೀಡಲಾಗುತ್ತಿತ್ತು. ಹಲವು ವರ್ಷಗಳಿಂದ ಯಾವುದೇ ಗೊಂದಲವಿಲ್ಲದೆ ಜಾರಿಯಲ್ಲಿದ್ದ ಈ ವ್ಯವಸ್ಥೆಯನ್ನು ಬದಲಿಸಿ, ಏಕಾಏಕಿ ಆದಾಯ ಪ್ರಮಾಣಪತ್ರ ಕಡ್ಡಾಯಗೊಳಿಸಿರುವುದು ಬಡವರ ಜೀವನೋಪಾಯಕ್ಕೆ ಪೆಟ್ಟು ನೀಡಿದಂತಾಗಿದೆ. ಸಾಮಾಜಿಕ ಭದ್ರತೆ ನೀಡಬೇಕಾದ ಸರ್ಕಾರವೇ ಬಡವರ ಜೀವನದ ಆಧಾರವಾಗಿರುವ ವೇತನವನ್ನು ಸ್ಥಗಿತಗೊಳಿಸಿರುವುದು ಅತ್ಯಂತ ಅಮಾನವೀಯ ಕ್ರಮ ಎಂದು ಟೀಕಿಸಿದರು.

ಇಂದು ಅನೇಕ ವೃದ್ಧರು ತಮ್ಮ ಔಷಧೋಪಚಾರಕ್ಕೂ ಹಣವಿಲ್ಲದೆ ಪರದಾಡುತ್ತಿದ್ದಾರೆ. ವಿಧವೆಯರು ಕುಟುಂಬ ನಿರ್ವಹಣೆಗೆ ತೊಂದರೆ ಅನುಭವಿಸುತ್ತಿದ್ದಾರೆ. ಅಂಗವಿಕಲರು ದೈನಂದಿನ ಜೀವನ ನಿರ್ವಹಿಸಲು ಸಂಕಷ್ಟ ಎದುರಿಸುತ್ತಿದ್ದಾರೆ. ತಿಂಗಳ ವೇತನವನ್ನೇ ನಂಬಿ ಬದುಕುತ್ತಿರುವ ಸಾವಿರಾರು ಬಡ ಕುಟುಂಬಗಳ ಜೀವನದೊಂದಿಗೆ ಸರ್ಕಾರ ಚೆಲ್ಲಾಟವಾಡುತ್ತಿದೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

ಕೂಡಲೇ 32 ಸಾವಿರ ಆದಾಯ ಪ್ರಮಾಣಪತ್ರ ಕಡ್ಡಾಯ ನಿಯಮವನ್ನು ಹಿಂಪಡೆದು, ಬಿಪಿಎಲ್ ಪಡಿತರ ಚೀಟಿ ಆಧಾರದ ಮೇಲೆಯೇ ಹಿಂದಿನಂತೆ ಸಾಮಾಜಿಕ ಭದ್ರತಾ ವೇತನ ಮಂಜೂರು ಮಾಡುವ ವ್ಯವಸ್ಥೆಯನ್ನು ಮರುಜಾರಿಗೆ ತರಬೇಕು. ಈಗಾಗಲೇ ಸ್ಥಗಿತಗೊಂಡಿರುವ 82,812 ಅರ್ಹ ಫಲಾನುಭವಿಗಳ ವೇತನವನ್ನು ತಕ್ಷಣ ಮರುಪ್ರಾರಂಭಿಸಬೇಕು. ಸರ್ಕಾರ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸದಿದ್ದರೆ ಬಿಜೆಪಿ ಜನರೊಂದಿಗೆ ಸೇರಿ ಜಿಲ್ಲಾದ್ಯಂತ ಉಗ್ರ ಹೋರಾಟ ನಡೆಸಲಿದೆ ಎಂದು ಡಾ. ಶೈಲೇಂದ್ರ ಬೆಲ್ದಾಳೆ ಎಚ್ಚರಿಕೆ ನೀಡಿದರು.

# ಕೃಷಿ ಮಹಾವಿದ್ಯಾಲಯ ವಿದ್ಯಾರ್ಥಿಗಳ ಅನಿರ್ದಿಷ್ಟಾವಧಿ ಮುಷ್ಕರ ಆರಂಭ



**ವಿಜಯಪುರ, ಜು. 24:** ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ನಗರದ ಹೊರ ವಲಯದ ಹಿಟ್ನಳ್ಳಿ ಕೃಷಿ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಗುರುವಾರದಿಂದ ಅನಿರ್ದಿಷ್ಟಾವಧಿ ಮುಷ್ಕರ ಆರಂಭಿಸಿದ್ದಾರೆ.

ಕೃಷಿ ಇಲಾಖೆಯಲ್ಲಿನ ಖಾಲಿ ಇರುವ ಕೃಷಿ ಅಧಿಕಾರಿ ಹಾಗೂ ಸಹಾಯಕ ಕೃಷಿ ಅಧಿಕಾರಿ ಹುದ್ದೆಗಳ ನೇಮಕಾತಿಗೆ ಸರ್ಕಾರ ಅಧಿಸೂಚನೆ ಹೊರಡಿಸಿದ್ದು, ಅದರಲ್ಲಿ ಬಿ.ಇ. ಬಯೋಟೆಕ್ನಾಲಜಿ ಪದವೀಧರರಿಗೂ ಅರ್ಜಿ ಸಲ್ಲಿಸಲು ಅವಕಾಶ ನೀಡಿರುವುದನ್ನು ವಿದ್ಯಾರ್ಥಿಗಳು ತೀವ್ರವಾಗಿ ವಿರೋಧಿಸಿದ್ದಾರೆ. ಕೃಷಿ ವಿಷಯಗಳಲ್ಲಿ ಪದವಿ ಪಡೆದ ವಿದ್ಯಾರ್ಥಿಗಳಿಗೆ ಇದರಿಂದ ಅನ್ಯಾಯವಾಗುತ್ತಿದೆ ಎಂದು ಅವರು ಆರೋಪಿಸಿದ್ದಾರೆ.

ಭಾರತೀಯ ಕೃಷಿ ಅನುಸಂಧಾನ ಪರಿಷತ್ (ICAR) ಮಾನ್ಯತೆ ಪಡೆದ ಕೃಷಿ ವಿಶ್ವವಿದ್ಯಾಲಯಗಳಲ್ಲಿ ವಿದ್ಯಾಭ್ಯಾಸ ಮಾಡಿದ ಪದವೀಧರರಿಗೆ ಮಾತ್ರ ಕೃಷಿ ಇಲಾಖೆಯ ವಿವಿಧ ಹುದ್ದೆಗಳ ನೇಮಕಾತಿಯಲ್ಲಿ ಅವಕಾಶ ಕಲ್ಪಿಸಬೇಕು. ಐಸಿಎಆರ್ ಮಾನ್ಯತೆ ಇಲ್ಲದ ಖಾಸಗಿ ವಿಶ್ವವಿದ್ಯಾಲಯಗಳ ಅಭ್ಯರ್ಥಿಗಳಿಗೆ ಅವಕಾಶ ನೀಡಬಾರದು. ಜೊತೆಗೆ, ಕೃಷಿ ಇಲಾಖೆಯಲ್ಲಿ ಪ್ರತಿವರ್ಷ ಖಾಲಿಯಾಗುವ ಹುದ್ದೆಗಳನ್ನು ನಿಯಮಿತವಾಗಿ ಭರ್ತಿ ಮಾಡಬೇಕು ಎಂಬುದು ವಿದ್ಯಾರ್ಥಿಗಳ ಪ್ರಮುಖ ಬೇಡಿಕೆಯಾಗಿದೆ.

ವಿದ್ಯಾರ್ಥಿ ಮುಖಂಡರಾದ ಎಂ.ಡಿ. ಅಮೀರ, ಸುರೇಶ ಬಿರಾದಾರ, ಶರಣಬಸು ನಾಯ್ಕಲ್, ರೋಹಿಣಿ ದೇಸಾಯಿ ಹಾಗೂ ವೈಷ್ಣವಿ ಕೆ. ಅವರ ನೇತೃತ್ವದಲ್ಲಿ ಪ್ರತಿಭಟನಾ ನಿರತ ವಿದ್ಯಾರ್ಥಿಗಳು ಪ್ರಭಾರಿ ಡೀನ್ ಡಾ. ಎ.ಪಿ. ಬಿರಾದಾರ ಹಾಗೂ ಸಹ ವಿಸ್ತರಣೆ ನಿರ್ದೇಶಕ ಡಾ. ಆರ್.ಬಿ. ಜೊಳ್ಳಿ ಅವರಿಗೆ ಮನವಿ ಪತ್ರ ಸಲ್ಲಿಸಿದರು.

ಮನವಿ ಸಲ್ಲಿಸಿದ ಬಳಿಕ ಕಾಲೇಜು ಆವರಣದ ಮುಂಭಾಗದಲ್ಲಿ ಶಾಂತಿಯುತವಾಗಿ ಅನಿರ್ದಿಷ್ಟಾವಧಿ ಮುಷ್ಕರ ಆರಂಭಿಸಲಾಯಿತು. ಪ್ರತಿಭಟನೆಯಲ್ಲಿ ಮಹಾವಿದ್ಯಾಲಯದ ನೂರಾರು ವಿದ್ಯಾರ್ಥಿ-ವಿದ್ಯಾರ್ಥಿನಿಯರು ಭಾಗವಹಿಸಿ ತಮ್ಮ ಬೇಡಿಕೆಗಳನ್ನು ಸರ್ಕಾರ ಶೀಘ್ರ ಈಡೇರಿಸಬೇಕೆಂದು ಒತ್ತಾಯಿಸಿದರು.

**ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ**

**6360866626**

# ಮುಖ್ಯ ರಸ್ತೆಯಿಂದ ಶಾಲೆ ಸಂಪರ್ಕಕ್ಕೆ ಕೆಸರೇ ಅಡ್ಡಿ

**ಕರಜಗಿ: ಜು.24:**ಕಲಬುರಗಿ ಜಿಲ್ಲೆಯ ಅಫಜಲಪುರ ತಾಲೂಕಿನ ಕರಜಗಿ ಗ್ರಾಮದ ಮೊರಾರ್ಜಿ ದೇಸಾಯಿ ವಸತಿ ಶಾಲೆಗೆ ತೆರಳುವ ಮುಖ್ಯ ಸಂಪರ್ಕ ರಸ್ತೆಯ ಆರಂಭದ ಸುಮಾರು 200ರಿಂದ300 ಮೀಟರ್ ರಸ್ತೆ ಸಂಪೂರ್ಣ ಹದಗೆಟ್ಟಿದ್ದು, ವಿದ್ಯಾರ್ಥಿಗಳು, ಶಿಕ್ಷಕರು, ರೈತರು ಹಾಗೂ ಗ್ರಾಮಸ್ಥರು ಸಂಚಾರಕ್ಕೆ ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ.

ಮುಖ್ಯ ರಸ್ತೆಯಿಂದ ಸರಿ ಸುಮಾರು 200ರಿಂದ 300ಮೀಟರ್ ವರೆಗೆ ರಸ್ತೆ ಅಭಿವೃದ್ಧಿಯಾಗದೆ ಉಳಿದಿದ್ದು, ಅದರ ನಂತರದಿಂದ ಶಾಲೆಯವರೆಗೆ ಸಿಸಿ ರಸ್ತೆ ನಿರ್ಮಾಣ ಪೂರ್ಣಗೊಂಡಿದೆ. ಆದರೆ ಮುಖ್ಯ ರಸ್ತೆಗೆ ಸಂಪರ್ಕ ಕಲ್ಪಿಸುವ ಆರಂಭದ ರಸ್ತೆ ಅಭಿವೃದ್ಧಿಯಾಗದ ಕಾರಣ, ಮಳೆಗಾಲದಲ್ಲಿ ಸಮಸ್ಯೆ ಮತ್ತಷ್ಟು ಗಂಭೀರವಾಗುತ್ತಿದೆ.

ಮಳೆ ಬಂದಾಗ ಈ ಭಾಗದಲ್ಲಿ ನೀರು ನಿಲ್ಲುವುದರ ಜೊತೆಗೆ ಗ್ರಾಮದ ಚರಂಡಿ ನೀರು ಕೂಡ ರಸ್ತೆಯಲ್ಲೇ ಹರಿದು ಬರುತ್ತಿದ್ದು, ರಸ್ತೆ ಸಂಪೂರ್ಣ ಕೆಸರುಮಯವಾಗುತ್ತಿದೆ. ಇದರಿಂದ ಪ್ರತಿನಿತ್ಯ ಇದೇ ಮಾರ್ಗದಲ್ಲಿ ಶಾಲೆಗೆ ತೆರಳುವ ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ಕಷ್ಟಪಟ್ಟು ಸಂಚರಿಸುವಂತಾಗಿದೆ. ಇದೇ ರಸ್ತೆ ಮೂಲಕ ರೈತರು ತಮ್ಮ ಹೊಲ-ಗದ್ದೆಗಳಿಗೆ ತೆರಳುವುದರಿಂದ ಅವರಿಗೂ ತೀವ್ರ ತೊಂದರೆಯಾಗುತ್ತಿದೆ.

ಮುಂದಿನ ಭಾಗದಲ್ಲಿ ಸಿಸಿ ರಸ್ತೆ ನಿರ್ಮಾಣವಾಗಿದ್ದರೂ, ಮುಖ್ಯ ರಸ್ತೆಯಿಂದ ಸಂಪರ್ಕ ಕಲ್ಪಿಸುವ ಕೇವಲ ಸುಮಾರು 200-300ಮೀಟರ್ ರಸ್ತೆ ಬಾಕಿ ಉಳಿದಿರುವುದರಿಂದ ಸಾರ್ವಜನಿಕರಿಗೆ ಸುಗಮ ಸಂಚಾರ ಸಾಧ್ಯವಾಗುತ್ತಿಲ್ಲ. ವಿಶೇಷವಾಗಿ ಮಳೆಗಾಲದಲ್ಲಿ ದ್ವಿಚಕ್ರ ವಾಹನ ಸವಾರರು ಹಾಗೂ ವಿದ್ಯಾರ್ಥಿಗಳು ಜಾರಿ ಬೀಳುವ ಆತಂಕವೂ ಎದುರಾಗಿದೆ.

ಆದ್ದರಿಂದ ಸಂಬಂಧಪಟ್ಟ ಗ್ರಾಮ ಪಂಚಾಯಿತಿ ಹಾಗೂ ಇಲಾಖೆಯ ಅಧಿಕಾರಿಗಳು ತಕ್ಷಣ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ಸಾರ್ವಜನಿಕರು ಮತ್ತು



ವಿದ್ಯಾರ್ಥಿಗಳು ಎದುರಿಸುತ್ತಿರುವ ಸಮಸ್ಯೆಯ ಗಂಭೀರತೆಯನ್ನು ಅರಿತು, ಬಾಕಿ ಉಳಿದಿರುವ ರಸ್ತೆಗೆ ತಾತ್ಕಾಲಿಕವಾಗಿ ಮುರುಮ್ ಹಾಕಿ ಸಂಚಾರಕ್ಕೆ ಅನುಕೂಲ ಕಲ್ಪಿಸಬೇಕು ಅಥವಾ ಶಾಶ್ವತ ಪರಿಹಾರವಾಗಿ ಸಿಸಿ ರಸ್ತೆ ನಿರ್ಮಾಣಕ್ಕೆ ತ್ವರಿತ ಕ್ರಮ ಕೈಗೊಳ್ಳಬೇಕು ಎಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.

ರಸ್ತೆ ಅಭಿವೃದ್ಧಿಯಾದರೆ ವಿದ್ಯಾರ್ಥಿಗಳು, ಶಿಕ್ಷಕರು, ರೈತರು ಹಾಗೂ ಗ್ರಾಮಸ್ಥರಿಗೆ ಬಹುದೊಡ್ಡ ಅನುಕೂಲವಾಗಲಿದೆ. ಅಧಿಕಾರಿಗಳು ವಿಳಂಬ ಮಾಡದೆ ತಕ್ಷಣ ಪರಿಶೀಲಿಸಿ ರಸ್ತೆ ಕಾಮಗಾರಿಗೆ ಕ್ರಮ ಕೈಗೊಳ್ಳಬೇಕು ಎಂದು ಗ್ರಾಮಸ್ಥರು ಕಳಕಳಿಯಿಂದ ಆಗ್ರಹಿಸಿದ್ದಾರೆ.

# ಬಾಹ್ಯಾಕಾಶ, ವೈಮಾನಿಕ ವಲಯ ಹಾಗೂ ಸುಧಾರಿತ ತಂತ್ರಜ್ಞಾನ ಕ್ಷೇತ್ರದ ಸಮ್ಮೇಳನದಲ್ಲಿ ಸಿಯುಕೆ ಭಾಗಿ




**ಕಲಬುರಗಿ:ಜು.24:**ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ (ಸಿಯುಕೆ) ಎಲೆಕ್ಟ್ರಾನಿಕ್ಸ್ ಮತ್ತು ಸಂವಹನ ಎಂಜಿನಿಯರಿಂಗ್ ವಿಭಾಗವು ಇತ್ತೀಚೆಗೆ 2026 ಜುಲೈ 19 ರಿಂದ 21ರ ವರೆಗೆ ಬೆಂಗಳೂರಿನಲ್ಲಿ ನಡೆದ ಖಇಇಇ ಖಕಂಅಇ 2026 ಸಮ್ಮೇಳನದಲ್ಲಿ ಭಾಗವಹಿಸಿತು.

ಈ ಸಮ್ಮೇಳನದಲ್ಲಿ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ.ಬಟ್ಟು ಸತ್ಯನಾರಾಯಣ ಹಾಗೂ ಎಂಜಿನಿಯರಿಂಗ್ ನಿಕಾಯದ ಡೀನ್ ಹಾಗೂ ಎಲೆಕ್ಟ್ರಾನಿಕ್ಸ್ ಮತ್ತು ಸಂವಹನ ಎಂಜಿನಿಯರಿಂಗ್ ವಿಭಾಗದ ಮುಖ್ಯಸ್ಥರಾದ ಪ್ರೊ. ಪರಮೇಶ ಅವರು ಹಾಗೂ ಸಹಾಯಕ ಪ್ರಾಧ್ಯಾಪಕರಾದ ಡಾ. ನೃಸಿಂಘ ಚರಣ್ ಪ್ರಧಾನ್ ಸೇರಿದಂತೆ ವಿಭಾಗದ 15 ಸ್ನಾತಕೋತ್ತರ ಮತ್ತು ಸಂಶೋಧನಾ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ದೇಶದ ಬಾಹ್ಯಾಕಾಶ, ವೈಮಾನಿಕ ವಲಯ ಮತ್ತು ಸುಧಾರಿತ ತಂತ್ರಜ್ಞಾನ ಕ್ಷೇತ್ರಗಳಲ್ಲಿ ಸೇರಿದಂತೆ ದೇಶದ ವಿವಿಧ ಭಾಗಗಳಿಂದ ಸುಮಾರು 70ಕ್ಕೂ ಹೆಚ್ಚು ಕುಲಪತಿಗಳು, ನಿರ್ದೇಶಕರು, ಖ್ಯಾತ ವಿಜ್ಞಾನಿಗಳು, ಕೈಗಾರಿಕಾ ಕ್ಷೇತ್ರದ ಪ್ರಮುಖರು ಹಾಗೂ ಶಿಕ್ಷಣ ತಜ್ಞರು ಈ ಸಮ್ಮೇಳನದಲ್ಲಿ ಭಾಗವಹಿಸಿದ್ದರು. ಭಾರತದ ಪ್ರತಿಷ್ಠಿತ ಸಮ್ಮೇಳನಗಳಲ್ಲಿ ಖಇಇಇ ಖಕಂಅಇ 2026 ಸಮ್ಮೇಳನವು ಯಶಸ್ವಿಯಾಗಿ ಹೊರಹೊಮ್ಮಿತು.

ಈ ಸಮ್ಮೇಳನದಲ್ಲಿ ಪ್ರಮುಖವಾಗಿ ದೇಶದ ಪ್ರತಿಷ್ಠಿತ ಸಂಶೋಧನಾ ಕೇಂದ್ರವಾದ ಇಸ್ರೋ (ISRO) ಮತ್ತು ಡಿಆರ್‌ಡಿಒ (DRDO) ಕೇಂದ್ರಗಳ ಅಧ್ಯಕ್ಷರು, ಖ್ಯಾತ ವಿಜ್ಞಾನಿಗಳು ಸೇರಿದಂತೆ ರಕ್ಷಣಾ ವಲಯ, ಬಾಹ್ಯಾಕಾಶ, ವೈಮಾನಿಕ ವಲಯ ಮತ್ತು ಸಂಶೋಧನಾ ಕ್ಷೇತ್ರದ ಅನೇಕ ಗಣ್ಯರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಈ ಸಮ್ಮೇಳನದಲ್ಲಿ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೋ. ಬಟ್ಟು ಸತ್ಯನಾರಾಯಣ ಅವರು ದೇಶದ ಪ್ರಮುಖ ಹಿರಿಯ ವಿಜ್ಞಾನಿಗಳಾದ ಡಾ. ಜಿ. ಸತೀಶ್ ರೆಡ್ಡಿ, ಡಾ. ಬಿ. ಕೆ. ದಾಸ್, ಡಾ. ಎಸ್. ಸೋಮನಾಥ್ ಅವರು ಸೇರಿದಂತೆ ಹಲವಾರು ಹಿರಿಯ ವಿಜ್ಞಾನಿಗಳೊಂದಿಗೆ ಕೇಂದ್ರೀಯ ವಿ.ವಿ.ಯ ಭವಿಷ್ಯದ ಶೈಕ್ಷಣಿಕ ಸಹಭಾಗಿತ್ವ, ಜಂಟಿ ಸಂಶೋಧನೆ ಹಾಗೂ ಮುಂಬರುವ ಆಯೋಜನೆ ಮಾಡುವ ಪ್ರಮುಖ ಯೋಜನೆಗಳ ಕುರಿತು ಚರ್ಚೆ ನಡೆಸಿದರು. ಹಾಗೂ ಮುಂಬರುವ ದಿನಗಳಲ್ಲಿ ನಮ್ಮ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯಕ್ಕೆ ಭೇಟಿ ನೀಡುವಂತೆ ಹಾಗೂ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ಮಾಡುವಂತೆ ದೇಶದ ಪ್ರಮುಖ ಹಿರಿಯ ವಿಜ್ಞಾನಿಗಳನ್ನು ಈ ಸಂದರ್ಭದಲ್ಲಿ ಕುಲಪತಿಗಳು ಆಹ್ವಾನಿಸಿದರು.

ಸಮ್ಮೇಳನದ ಪ್ರಮುಖ ಆಕರ್ಷಣೆಯಾಗಿ ಭಾರತೀಯ ಗಗನಯಾತ್ರಿಗಳಾದ ಶ್ರೀ ಅಂಗದ್ ಪ್ರತಾಪ್ ಹಾಗೂ ಗ್ರೂಪ್ ಕ್ಯಾಪ್ಟನ್ ಶ್ರೀ ಶುಭಾಂಶು ಶುಕ್ಲಾ ಅವರೊಂದಿಗೆ ವಿದ್ಯಾರ್ಥಿಗಳು ಸಂವಾದ ನಡೆಸಿದರು. ಭಾರತದ ಬಾಹ್ಯಾಕಾಶ ಅನ್ವೇಷಣೆಯ ಭವಿಷ್ಯದ ಕುರಿತು ತಮ್ಮ ಅನುಭವಗಳು ಮತ್ತು ದೂರದೃಷ್ಟಿಯನ್ನು ಹಂಚಿಕೊಂಡರು ಇದು ವಿದ್ಯಾರ್ಥಿಗಳಿಗೆ ಸ್ಫೂರ್ತಿದಾಯಕವಾಯಿತು,

ಈ ಸಮ್ಮೇಳನದಲ್ಲಿ ನಮ್ಮ ವಿಶ್ವವಿದ್ಯಾಲಯದ ಸಂಶೋಧನಾ ವಿದ್ಯಾರ್ಥಿಗಳು ಹಾಗೂ ಸ್ನಾತಕೋತ್ತರ ವಿದ್ಯಾರ್ಥಿಗಳು ತಮ್ಮ ಸಂಶೋಧನಾ ಪ್ರಬಂಧಗಳನ್ನು ಮಂಡಿಸಿದರು. ಈ ಸಮ್ಮೇಳನವು ತಮ್ಮ ಸಂಶೋಧನಾ ಸಾಧನೆಗಳನ್ನು ರಾಷ್ಟ್ರೀಯ ಮಟ್ಟದಲ್ಲಿ ಪ್ರದರ್ಶಿಸಲು ಉತ್ತಮ ವೇದಿಕೆಯಾಗಿತ್ತು.

ಖಇಇಇ ಖಕಂಅಇ 2026 ಸಮ್ಮೇಳನದಲ್ಲಿ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಭಾಗವಹಿಸುವಿಕೆಯು ಸಂಶೋಧನೆ, ನಾವೀನ್ಯತೆ ಹಾಗೂ ಇಸ್ರೋ, ಡಿಆರ್‌ಡಿಒ, ಶೈಕ್ಷಣಿಕ ಸಂಸ್ಥೆಗಳು ಮತ್ತು ಕೈಗಾರಿಕಾ ವಲಯಗಳೊಂದಿಗೆ ಅರ್ಥಪೂರ್ಣ ಸಹಯೋಗ ಬೆಳೆಸುವ ವಿಶ್ವವಿದ್ಯಾಲಯದ ಬದ್ಧತೆಯನ್ನು ಎತ್ತಿ ತೋರಿಸಿದೆ.

# ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಬಡ ವಿದ್ಯಾರ್ಥಿಗಳಿಗೆ ಉಚಿತ ಮಾರ್ಗದರ್ಶನ

**ಆಳಂದ:** ಕರ್ನಾಟಕ ಸರ್ಕಾರದ ಕಾಲೇಜು ಶಿಕ್ಷಣ ಇಲಾಖೆ ಅಡಿಯಲ್ಲಿ ಬರುವ ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ವತಿಯಿಂದ ಗ್ರಾಮೀಣ ಭಾಗದ ಬಡ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಒಂದು ತಿಂಗಳ ಕಾಲ ಹಮ್ಮಿಕೊಂಡಿದ್ದ ಉಚಿತ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕಾರ್ಯಗಾರ ನಡೆದ ಮಾದರಿ ಪರೀಕ್ಷೆಯೊಂದಿಗೆ ಸಮಾರೋಪಗೊಂಡಿತು.ಸಮಾರೋಪ ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲ ಡಾ. ಪ್ರೇಮಿಳಾ ಅಂಬಾರಾಯ ಮಾತನಾಡಿ, ಗ್ರಾಮೀಣ ಭಾಗದ ಬಡ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಕಾಲೇಜಿನಲ್ಲಿ ನಿರಂತರವಾಗಿ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ ಎಂದರು.ಕಳೆದ ವರ್ಷದಿಂದ ರಜಾ ಅವಧಿಯಲ್ಲಿ ಅತಿಥಿ ಉಪನ್ಯಾಸಕರ ನಿಸ್ವಾರ್ಥ ಸೇವೆಯಿಂದಾಗಿ ಈ ಕಾರ್ಯಕ್ರಮ ಯಶಸ್ವಿಯಾಗಿದೆ ಎಂದು ಸ್ಮರಿಸಿದ ಅವರು, ಮುಂದಿನ ದಿನಗಳಲ್ಲಿ ವರ್ಷಪೂರ್ತಿ ದಿನಕ್ಕೆ ಒಂದು ಗಂಟೆಯಂತೆ ಸ್ಪರ್ಧಾತ್ಮಕ ಪರೀಕ್ಷೆಗಳ ಕುರಿತ ತರಗತಿಗಳನ್ನು ಆಯೋಜಿಸುವ ಭರವಸೆ ನೀಡಿದರು.ಮುಖ್ಯ ಅತಿಥಿಗಳಾಗಿ ಡಾ. ಶಿವಶರಣಪ್ಪ ನಿಂಬರಗಿ ಮತ್ತು ಡಾ. ಅರವಿಂದ್ ಕುಮಾರ್ ಭದ್ರಶೆಟ್ಟಿ ಭಾಗವಹಿಸಿದ್ದರು.ತರಬೇತಿ ಶಿಬಿರದಲ್ಲಿ ವಿಷಯ ತಜ್ಞರಾಗಿ ಪಾಠ ಮಾಡಿದ ಡಾ. ಅರವಿಂದ್ ಅಂಗಡಿ, ಡಾ. ಮಹದೇವ್ ಮೋಘಾ, ಡಾ. ಧಾಕಪ್ಪ, ಶ್ರೀ ರಾಜಶೇಖರ್ ಪಾಟೀಲ್, ಡಾ. ಶಿವಪ್ಪ ಭೂಸನೂರ, ಶ್ರೀ ರಾಜ್ ರೆಡ್ಡಿ ಪಾಟೀಲ, ಡಾ. ಸುಭಾಷ್ ಚಂದ್ರ, ಡಾ. ಶಿವಶಂಕರಯ್ಯ ಸ್ವಾಮಿ, ಶ್ರೀ ಶರಣಪ್ಪ ಕೌಂಚೆ ಹಾಗೂ ಕಾರ್ಯಕ್ರಮಕ್ಕೆ ಸಹಕಾರ ನೀಡಿದ ಶ್ರೀ ಶಾಂತ ಮಲ್ಲಪ್ಪ ಪಾಟೀಲ್, ಶ್ರೀ ಶರಣಪ್ಪ ಭಾವಿ, ಸಂತೋಷ್, ಸಂದೀಪ್ ಮತ್ತು ಶ್ರೀಮತಿ ಚೆನ್ನಮ್ಮ ಅವರನ್ನು ಕಾಲೇಜಿನ ವತಿಯಿಂದ ಅಭಿನಂದಿಸಲಾಯಿತು.



ಭಾಗ್ಯಶ್ರೀಗೆ ಪ್ರಥಮ, ವಿನಾಯಕಗೆ ದ್ವಿತೀಯ ಬಹುಮಾನ:ಮಾದರಿ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಹೆಚ್ಚಿನ ಅಂಕ ಗಳಿಸಿ ಪ್ರಥಮ ಸ್ಥಾನ ಪಡೆದ ಕು. ಭಾಗ್ಯಶ್ರೀ ಹಾಗೂ ದ್ವಿತೀಯ ಸ್ಥಾನ ಪಡೆದ ವಿನಾಯಕ ಅವರಿಗೆ ಬಹುಮಾನ ನೀಡಿ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ವಿದ್ಯಾರ್ಥಿಗಳು, ಸರ್ಕಾರಿ ಹುದ್ದೆ ಪಡೆಯಲು ಪೂರಕವಾಗುವ ಇಂತಹ ತರಬೇತಿ ಕಾರ್ಯಗಾರ ಆಯೋಜಿಸಿದ್ದಕ್ಕೆ ಸಂತಸ ವ್ಯಕ್ತಪಡಿಸಿದರು.

ಕಾರ್ಯಕ್ರಮವನ್ನು ಡಾ. ಶಿವಪ್ಪ ಭೂಸನೂರ ನಿರೂಪಿಸಿದರೆ, ಶ್ರೀ ರಾಜ್ ರೆಡ್ಡಿ ಪಾಟೀಲ ವಂದಿಸಿದರು.

## ಜು. 26 ಕ್ಕೆ ನಗರದಲ್ಲಿ ಜಿಲ್ಲಾಮಟ್ಟದ ಕಾರ್ಯನಿರತ ಪತ್ರಕರ್ತರ ಸಂಘದ ದಿನಾಚರಣೆ

**ಬಳ್ಳಾರಿ, ಜು.24:** ನಗರದ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿರುವ ಗಾಂಧಿ ಭವನದಲ್ಲಿ ಜೂನ್ 26 ರಂದು ಬೆಳಿಗ್ಗೆ 10.30 ಕ್ಕೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದಿಂದ ಪತ್ರಿಕಾ ದಿನಾಚರಣೆಯನ್ನು ಹಮ್ಮಿಕೊಂಡಿದೆ.

ಕಾರ್ಯಕ್ರಮವನ್ನು ಸಮಾಜಮುಖಿ ಮಾಸ ಪತ್ರಿಕೆಯ ಸಂಪಾದಕ ಚಂದ್ರಕಾಂತ ವಡ್ಡು ಅವರು ಉದ್ಘಾಟನೆ ಮಾಡಲಿದ್ದಾರೆ. ಕರ್ನಾಟಕ ಮಾಧ್ಯಮ ಅಕಾಡೆಮಿಯ ಸದಸ್ಯ ಕೆ.ನಿಂಗಜ್ಜ ಅವರು ಮಾಧ್ಯಮ ಅಕಾಡೆಮಿ ಮತ್ತು ಪತ್ರಿಕೋದ್ಯಮ ಸಂಬಂಧ ಕುರಿತು ಮಾತನಾಡಲಿದ್ದಾರೆ. ಸಂಘದ ಜಿಲ್ಲಾ ಅಧ್ಯಕ್ಷ ಎನ್.ವೀರಭದ್ರಗೌಡ ಅಧ್ಯಕ್ಷತೆವಹಿಸಲಿದ್ದಾರೆ.

ಹಲವು ವರ್ಷಗಳಿಂದ ಪತ್ರಿಕೆ ವಿತರಣೆ ಮಾಡುತ್ತಿರುವ ಬಳ್ಳಾರಿಯ ಶಿವಾಜಿ ಮರಾಟಿ ರಾಜಶೇಖರ, ಸಿರುಗುಪ್ಪದ ಪಿ.ಹುಸೇನ್ ಸಾಬ್ ಮತ್ತು ಕಂಪ್ಲಿಯ ವೈ.ಬಿ.ಆನಂದರಾವ್ ಅವರನ್ನು ಡಿಸಿ ಕೆ.ನಾಗೇಂದ್ರಪ್ರಸಾದ್, ಎಸ್ಪಿ ಡಾ.ಸುಮನ್ ಪನ್ನೇಕರ್ ಮತ್ತು ಜಿಪಂ ಸಿಇಓ ಮಹಮ್ಮದ್ ಹಾರೀಸ್ ಸುಮೇರ್ ಅವರು ಸನ್ಮಾನಿ ಗೌರವಿಸಲಿದ್ದಾರೆ.

ಎಸ್ ಎಸ್ ಎಲ್ ಸಿ ಮತ್ತು ದ್ವಿತೀಯ ಪಿಯುಸಿಯಲ್ಲಿ ಉತ್ತಮಅಂಕ ಪಡೆದ ಸಂಘದ ಸದಸ್ಯರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಸಂಘದ ರಾಜ್ ಅಧ್ಯಕ್ಷ ಶಿವನಂದ ತಗಡೂರು, ಪ್ರಧಾನ ಕಾರ್ಯದರ್ಶಿ, ಜಿ.ಸಿ.ಲೋಕೇಶ್, ಕಾರ್ಯದರ್ಶಿ ಸೋಮಶೇಖರ ಕೆರಗೋಡು ಅವರಿಂದ ನಡೆಯಲಿದೆ.

ವಾರ್ತಾ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಬಿ.ವಿ.ತುಕರಾಂ ಅವರು ಉಪಸ್ಥಿತರಿರಲಿದ್ದಾರೆ.

## ರೈತರು ತಪ್ಪದೇ ಬೆಳೆ ವಿಮೆ ಮಾಡಿಸಿಕೊಳ್ಳಲು ಸಲಹೆ



**ಬಳ್ಳಾರಿ,ಜು.24–** ಪ್ರಸ್ತುತ ಬೆಳೆ ವಿಮೆಯನ್ನು ಗ್ರಾಮ ಪಂಚಾಯತಿ ಮಟ್ಟದಲ್ಲೇ ಜಾರಿಗೊಳಿಸಲಾಗಿದ್ದು, ಪಹಣಿ ಹೊಂದಿರುವ ಪ್ರತಿಯೊಬ್ಬ ರೈತರೂ ಈ ಯೋಜನೆಗೆ ಅರ್ಹರಾಗಿರುತ್ತಾರೆ. ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಉಪ ಕೃಷಿ ನಿರ್ದೇಶಕ ಎಸ್.ಎನ್. ಮಂಜುನಾಥ್ ಅವರು ಹೇಳಿದರು.

ತಾಲ್ಲೂಕು ಆಡಳಿತ, ಕೃಷಿ ಇಲಾಖೆ ಬಳ್ಳಾರಿ ಹಾಗೂ ಹಗರಿಯ ಕೃಷಿ ವಿಜ್ಞಾನ ಕೇಂದ್ರದ ಸಹಯೋಗದೊಂದಿಗೆ ಹಗರಿಯ ಕೆವಿಕೆಯಲ್ಲಿ 'ಪಿಎಂಎಸ್‌ಬಿವೈ ಬೆಳೆ ವಿಮೆ, ಪರ್ಯಾಯ ಬೆಳೆ ಪದ್ಧತಿಗಳು ಹಾಗೂ ಬರಗಾಲ ನಿರ್ವಹಣಾ ಕ್ರಮಗಳು' ಕುರಿತು ಬುಧವಾರ ಆಯೋಜಿಸಿದ್ದ ರೈತರಿಗೆ ಅರಿವು ಮೂಡಿಸುವ ವಿಶೇಷ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಬ್ಯಾಂಕ್‌ಗಳಲ್ಲಿ ಸಾಲ ಪಡೆದವರಿಗೆ ವಿಮೆ ಕಡ್ಡಾಯವಾಗಿದ್ದು, ರೈತರು ಬಿತ್ತನೆಗೆ ಮುಂಚಿತವಾಗಿಯೇ ವಿಮೆ ಮಾಡಿಸುವುದು ಸೂಕ್ತ. ಹತ್ತಿರದ 'ಗ್ರಾಮ ಒನ್' ಅಥವಾ 'ಗ್ರಾಹಕ ಸೇವಾ ಕೇಂದ್ರ'ಗಳಿಗೆ ಭೇಟಿ ನೀಡಿ ಕಂತಿನ ಮೊತ್ತ ಪಾವತಿಸಬೇಕು, ಎಂದು ತಿಳಿಸಿದರು.

ಬಳ್ಳಾರಿ ಭಾಗದ ರೈತರು ಹತ್ತಿ, ಮೆಕ್ಕೆಜೋಳ, ಸಜ್ಜೆ ಹಾಗೂ ಬರ ನಿರೋಧಕ ಬೆಳೆಯಾದ ನವಣೆ ಮತ್ತು ಸಾಮೆಗೆ ಕಡ್ಡಾಯವಾಗಿ ವಿಮೆ ಮಾಡಿಸಬೇಕೆಂದು ಕರೆ ನೀಡಿದರು. ಬಳ್ಳಾರಿ ಸಹಾಯಕ ಕೃಷಿ ನಿರ್ದೇಶಕ ಗರ್ಜಪ್ಪ ಅವರು ಮಾತನಾಡಿ, ಜುಲೈ 31ರ ಒಳಗಾಗಿ ಮಳೆಯಾಶ್ರಿತ ಮತ್ತು ನೀರಾವರಿ ವ್ಯಾಪ್ತಿಯ ಸೂರ್ಯಕಾಂತಿ, ಹತ್ತಿ, ಮುಸುಕಿನ ಜೋಳ ಹಾಗೂ ಜೋಳದ ಬೆಳೆಗೆ ವಿಮೆ ಮಾಡಿಸಲು ಕೊನೆಯ ದಿನವಾಗಿದೆ. ರೈತರು ಈ ತಕ್ಷಣವೇ ವಿಮೆ ನೋಂದಾಯಿಸಿಕೊಳ್ಳಬೇಕು ಎಂದು ಹೇಳಿದರು.

ಇನ್ನೂ ಬಿತ್ತನೆಯಾಗದ ಪ್ರದೇಶಗಳಲ್ಲಿ 'ವಿಬಿಜಿ–ರಾಮ್–ಜಿ' ಮತ್ತು 'ಕೃಷಿ ಭಾಗ್ಯ' ಯೋಜನೆಯಡಿ ಕಂದಕ ಬದು ಹಾಗೂ ಕೃಷಿ ಹೊಂಡಗಳನ್ನು ನಿರ್ಮಿಸಿಕೊಳ್ಳಬೇಕು. ಪ್ರಸಕ್ತ ಸಾಲಿನಲ್ಲಿ ಮಳೆ ಕೊರತೆಯಿರುವುದರಿಂದ ಪರ್ಯಾಯ ಬೆಳೆ ಬೆಳೆದು ರೈತರು ಲಾಭ ಕಂಡುಕೊಳ್ಳಬೇಕು ಎಂದು ಸಲಹೆ ನೀಡಿದರು.

ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥರು ಹಾಗೂ ಮಣ್ಣು ವಿಜ್ಞಾನಿಗಳಾದ ಡಾ. ರವಿ ಎಸ್. ಅವರು ಮಾತನಾಡಿ, ರೈತರು ಜಮೀನನ್ನು ಸಮತಟ್ಟು ಮಾಡದೆ ಉಳುಮೆ ಮಾಡಿ ಹಾಗೆಯೇ ಬಿಡುವುದರಿಂದ ಮಳೆಯಾದಾಗ ನೀರು ಮಣ್ಣಿನಲ್ಲಿ ಇಂಗಲು ನೆರವಾಗುತ್ತದೆ. ಆಗಸ್ಟ್ ಕೊನೆಯಲ್ಲಿ ಮಳೆಯಾದರೂ ಗೋಧಿ, ನವಣೆ, ರಾಗಿಯನ್ನು ಬೆಳೆಯಬಹುದು. ಮಣ್ಣಿನ ಫಲವತ್ತತೆ ಹೆಚ್ಚಿಸಲು ಹಸಿರೆಲೆ ಗೊಬ್ಬರಗಳನ್ನು ಬೆಳೆಸಬೇಕು ಎಂದು ಮಾಹಿತಿ ನೀಡಿದರು.

ಹವಮಾನ ಮುನ್ಸೂಚನೆ ಕುರಿತು ಮಾತನಾಡಿದ ಬೇಸಾಯ ತಜ್ಞರಾದ ಡಾ. ಕೃಷ್ಣಮೂರ್ತಿ ಅವರು, ಈ ಬಾರಿ ದೇಶದ ಶೇ.70 ರಷ್ಟು ಪ್ರದೇಶದಲ್ಲಿ ಮಳೆ ಅಭಾವವಾಗುವ ಸಾಧ್ಯತೆಯಿದ್ದು, ಕಡಿಮೆ ನೀರು ಬೇಡುವ ಕುಸುಬೆ, ಸಜ್ಜೆ, ಹುರುಳಿ, ಹಾಗೂ ಹಲಸಂದಿ ಬೆಳೆಗಳಿಗೆ ಆದ್ಯತೆ ನೀಡಬೇಕು ಎಂದು ರೈತರಿಗೆ ಮಾರ್ಗದರ್ಶನ ನೀಡಿದರು.

ಕಾರ್ಯಕ್ರಮದಲ್ಲಿ ಬಳ್ಳಾರಿ ತಾಲ್ಲೂಕಿನ ವಿವಿಧ ಗ್ರಾಮಗಳಿಂದ ಆಗಮಿಸಿದ್ದ ನೂರಾರು ಪ್ರಗತಿಪರ ರೈತರು ಭಾಗವಹಿಸಿ ಸಲಹೆ–ಸೂಚನೆಗಳ ಸದುಪಯೋಗ ಪಡೆದುಕೊಂಡರು.

ಈ ಸಂದರ್ಭದಲ್ಲಿ ಕೆವಿಕೆ ವಿಜ್ಞಾನಿ ಡಾ. ಪಾಲಯ್ಯ, ಡಾ. ನವೀನ್, ಸಹಾಯಕ ತೋಟಗಾರಿಕೆ ಅಧಿಕಾರಿ ಸುನಿಲ್, ತಾಲ್ಲೂಕು ಕೃಷಿಕ ಸಮಾಜದ ಸದಸ್ಯರಾದ ಗೋಪಾಲರೆಡ್ಡಿ, ರಾಮಣ್ಣ, ದೊಡ್ಡಬಸವರಾಜ, ಹೋಬಳಿ ಕೃಷಿ ಅಧಿಕಾರಿಗಳು, 'ಆತ್ಮ' ಯೋಜನೆಯ ಉಪಯೋಜನಾ ನಿರ್ದೇಶಕಿ ಕವಿತಾ ಕುಮಾರಿ ಹಾಗೂ 'ಕೃಷಿ ಸಂಜೀವಿನಿ' ಸಿಬ್ಬಂದಿಗಳು ಉಪಸ್ಥಿತರಿದ್ದರು.

# ದೆಹಲಿಯಲ್ಲಿ ವಿದ್ಯಾರ್ಥಿಗಳ ಮೇಲಿನ ಹಲ್ಲೆ ಖಂಡಿಸಿ ಡಿಎಸ್ ಎಸ್ ಧರಣಿ ಸತ್ಯಾಗ್ರಹ



**ಬಳ್ಳಾರಿ, ಜು.24:** ದೆಹಲಿಯ ಜಂತರ್ ಮಂತರ್ ನಲ್ಲಿ ಕಳೆದ 24 ದಿನದಿಂದ ನಡೆಯುತ್ತಿರುವ ಹೋರಾಟ ಬೆಂಬಲಿಸಿ, ಕೇಂದ್ರದ ವಿದ್ಯಾ ಮಂತ್ರಿ ಧರ್ಮೇಂದ್ರ ಪ್ರಧಾನ್ ಅವರು ರಾಜೀನಾಮೆ ನೀಡಬೇಕೆಂದು, ಸಿಜೆಪಿ ಪಕ್ಷ ನೇತ್ರತ್ವದಲ್ಲಿ ವಿದ್ಯಾರ್ಥಿಗಳು ಮತ್ತು ಯುವಜನರು ನಡೆಸುತ್ತಿರುವ ಶಾಂತಿಯುತ ಪ್ರತಿಭಟನೆಯ ಕಾರ್ಯ ಕರ್ತರು ಮೇಲೆ ಪೊಲೀಸ್ ನವರು ಅತಿರೇಕದ ವರ್ತನೆ ಮತ್ತು ಲಾಠಿಚಾರ್ಜ್ ಮಾಡಿರುವುದು ಟಿಯರ್ ಗಾಸ್ ದಾಳಿ ವಿದ್ಯಾರ್ಥಿನಿ ಗಳು ಮೇಲೆ ದಾಳಿ ನಡಿಸಿದ್ದು ಇದನ್ನು ವಿರೋಧಿಸಿ ಡಿ.ಜಿ.ಸಾಗರ್ ಬಣದ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ನೇತೃತ್ವದಲ್ಲಿ ಇಂದು ನಗರದ ಹಳೆ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಧರಣಿ ಸತ್ಯಾಗ್ರಹ ನಡೆಸಲಾಯ್ತು.

ಸಂಘಟನೆಯ ರಾಜ್ಯ ಸಂಘಟನಾ ಸಂಚಾಲಕ ಎ.ಮಾನಯ್ಯ ನೇತೃತ್ವದಲ್ಲಿ ಈ ಪ್ರತಿಭಾಟನಾ ಧರಣಿ ಸತ್ಯಾಗ್ರಹ ನಡೆಯಿತು. ವಿದ್ಯಾರ್ಥಿ ಯುವ ಜನರು ದಲಿತ, ಪ್ರಗತಿಪರ, ರೈತ ಸಂಘಟನೆಗಳು ಇದರಲ್ಲಿ ಪಾಲ್ಗೊಂಡಿದ್ದರು.

ನೈತಿಕ ಹೊಣೆ ಹೊತ್ತು ಕೇಂದ್ರ ಶಿಕ್ಷಣ ಸಚಿವರಾದ ಧರ್ಮೇಂದ್ರ ಪ್ರಧಾನ ಸಚಿವ ಸ್ಥಾನಕ್ಕೆ ರಾಜಿನಾಮೆ ನೀಡಬೇಕು. ದೇಶದ ಯುವ ಜನತೆ ಭವಿಷ್ಯಕ್ಕೆ ಧಕ್ಕೆ ತರುತ್ತಿರುವ ದೇಶದ ಪರೀಕ್ಷೆಗಳ ಅವ್ಯವಸ್ಥೆಯನ್ನು ಸರಿಪಡಿಸಬೇಕು. ಶಾಂತಿಯುತವಾಗಿ ಹೋರಾಟ ಮಾಡುತ್ತಿದ್ದ ವಿದ್ಯಾರ್ಥಿಗಳ ಮೇಲೆ ಲಾಠಿ ಚಾರ್ಜ್, ಟಿಯರ್ ಗ್ಯಾಸ್ ಬಿಟ್ಟು ವಿದ್ಯಾರ್ಥಿಗಳ ಮೇಲೆ ಅಮಾನುಷಕರವಾಗಿ ಥಳಿಸಿರುವುದನ್ನು ಖಂಡನೀಯ. ನೀಟ್–ಪರೀಕ್ಷೆ ಪ್ರಶ್ನೆ ಪತ್ರಿಕೆ ಸೋರಿಕೆ ಯಾಗಿರುವುದನ್ನು ಪ್ರತಿಭಾವಂತ ವಿದ್ಯಾರ್ಥಿಗಳು ಜೀವ ಕಳೆದುಕೊಂಡ ವಿದ್ಯಾರ್ಥಿಗಳ ಕುಟುಂಬಕ್ಕೆ ಪರಿಹಾರ ಕೂಡಲೇ ನೀಡಬೇಕೆಂದು ಆಗ್ರಹಿಸಲಾಯ್ತು.

ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ವಿಷಯದಲ್ಲಿ ಅವಮಾನವೀಯತೆಯಿಂದ ವರ್ತಿಸುತ್ತಿದೆ ಕೇಂದ್ರ ಬಿ.ಜೆ.ಪಿ. ಸರ್ಕಾರ. ಕೇವಲ ಬಂಡವಾಳಶಾಹಿಗಳ ಕೈಗೊಂಬೆಯಾಗಿ ಕೆಲಸ ಮಾಡುತ್ತಿದೆ. ದೇಶದ ಯುವ ಜನತೆ ಭವಿಷ್ಯಕ್ಕೆ ಧಕ್ಕೆ ತರುತ್ತಿರುವ ದೇಶದ ಪರೀಕ್ಷೆಗಳ ಅವ್ಯವಸ್ಥೆಯನ್ನು ಖಂಡಿಸಿ ಇದರಲ್ಲಿ ಸಂಪೂರ್ಣವಾಗಿ ಸುಧಾರಣೆ ತರಬೇಕೆಂದು ಒತ್ತಾಯಿಸಲಾಯ್ತು.

ಶೋಷಿತ ಸಮುದಾಯಗಳ ಜಿಲ್ಲಾಧ್ಯಕ್ಷ.ಕೆ. ಗಾದಿಲಿಂಗನ ಗೌಡ, ಚಲುವಾದಿ ಮಹಾಸಭದ. ರಾಜ್ಯ ಉಪಾಧ್ಯಕ್ಷ ನರಸಪ್ಪ, ಕರ್ನಾಟಕ ಪ್ರಾಂತ್ಯ ರೈತಸಂಘ ಜಿಲ್ಲಾಧ್ಯಕ್ಷ ವಿ.ಎಸ್. ಶಿವಶಂಕರ್, ಡಿಎಸ್ ಎಸ್ ನ ಜಿಲ್ಲಾ ಸಂಚಾಲಕ ಹೆಚ್.ಬಿ. ಗಂಗಪ್ಪ ಜಿಲ್ಲಾಸಂಘಟನಾ ಸಂಚಾಲಕ ದೇವದಾಸ ಕೆ. ಹೆಚ್. ಆಂಜನೇಯ ಮುಂಖಡರುಗಳಾದ ಬಿ. ರಮೇಶ್ ಟಿ.ಎಂ. ಎರಿಸ್ವಾಮಿ, ಬೆಳಗಲ್ಲು ಹುಲುಗಪ್ಪ, ಗಂಗಾಧರ. ತಾಲ್ಲೂಕು ಸಂಚಾಲಕರುಗಳಾದ ಹೆಚ್. ಮಲ್ಲಪ್ಪ ಬಳ್ಳಾರಿ. ಜಗದೀಶ್, ಕುಮಾರ್ ಮೆಟ್ರಿ(ಕಂಪ್ಲಿ) ಎಂ. ದೊಡ್ಡಬಸಪ್ಪ ಸಿರುಗುಪ್ಪ ಸಂಘಟನಾ ಸಂಚಾಲಕರುಗಳಾದ ಶಂಕರ್ ಬಾಪುಜಿನಗರ, ಎಸ್. ರಫಿ, ಭಿಮೇಶ್, ಎಂ.ಎಸ್. ಭೀಮಶಂಕರ್, ಎರಿಸ್ವಾಮಿ ಹಲುಕುಂದಿ, ತಿಪ್ಪಯ್ಯ ಸೋಮಸಮುದ್ರ, ಲಕ್ಷ್ಮಣ ಬಂಡಿಹಟ್ಟಿ, ಗಂಗಾದರ ಚೇಳ್ಗುರ್ಕಿ, ಕೃಷ್ಣ ಸಂಗನಕಲ್ಲು, ಹನುಮಂತ ಎತ್ತಿನ ಬೂದಿಹಾಳು, ಹನುಮಂತ ಕುಡುತಿನಿ, ರಮೇಶ್ ಇಂದಿರನಗರ, ಅಂಜಿ ಹಲಕುಂದಿ, ಎನ್ನಪ್ಪ ಬೆಳಗಲ್ಲು ಮೊದಲಾದವರು ಪಾಲ್ಗೊಂಡಿದ್ದರು.

# ಬರ ನಿರ್ವಹಣೆಯಲ್ಲಿ ನಿರ್ಲಕ್ಷ್ಯತೆ ವಹಿಸದಂತೆ ಕಾರ್ಯನಿರ್ವಹಿಸಿ ; ಕೆ ನೇಮಿರಾಜ ನಾಯ್ಕ




**ಕೊಟ್ಟೂರು: ಜುಲೈ 24:** ಕೊಟ್ಟೂರು ತಾಲೂಕು ಕಛೇರಿಯ ಮಹಾತ್ಮ ಗಾಂಧೀಜಿ ಸಭಾಂಗಣದಲ್ಲಿ ಇಂದು ಬರಗಾಲ ನಿರ್ವಹಣೆಯ "ಟಾಸ್ಕ್ ಫೋರ್ಸ್ ಸಮಿತಿ" ಸಭೆಯ ಅಧ್ಯಕ್ಷತೆಯನ್ನು ವಹಿಸಿದ್ದ ಹಗರಿಬೊಮ್ಮನಹಳ್ಳಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಶ್ರೀ ಕೆ ನೇಮಿರಾಜ ನಾಯ್ಕ ಇವರು ಮುಂಗಾರಿನಲ್ಲಿ ಮಳೆಯ ಪ್ರಮಾನ ಅತ್ಯಂತ ಕಡಿಮೆ ಇದ್ದು ಬರಗಾಲದ ಲಕ್ಷಣಗಳು ಗೋಚರಿಸಿದ್ದು ಮುಂದಿನ ದಿನಗಳಲ್ಲಿ ಬರ ನಿರ್ವಹಣೆಯಲ್ಲಿ ಸಂಬಂಧಿಸಿದ ಇಲಾಖಾ ಅಧಿಕಾರಿಗಳು ನಿರ್ಲಕ್ಷತೆ ವಹಿಸದಂತೆ ಕಾರ್ಯನಿರ್ವಹಿಸಬೇಕೆಂದು ಸೂಚಿಸಿದರು.

ಸಹಾಯಕ ಕೃಷಿ ನಿರ್ದೇಶಕರಾದ ತೇಜವರ್ಧನ್ಮಾತನಾಡಿ ಜೂನ್–ಜುಲೈ ನಲ್ಲಿ 107.2 ಮಿ.ಮೀ ಆಗಬೇಕಿದ್ದು ಹಾಲೀ 43.5 ಮಾತ್ರ ಆಗಿರುತ್ತದೆ ಶೇ 59ರಷ್ಟು ಕೊರತೆಯಾಗಿರುತ್ತದೆ ಈಬಾರಿ 14266 ಹೆಕ್ಟೇರ್ ಬಿತ್ತನೆಯಾಗಿದ್ದು 20035 ಹೆಕ್ಟೇರ್ ಬಿತ್ತನೆಯಾಗಿರುವುದಿಲ್ಲ ಬಿತ್ತನೆ ಕೇವಲ ಶೇ.42 ಮಾತ್ರ ಆಗಿರುತ್ತದೆ ಎಂದು ತಿಳಿಸಿದರು. ಆದ್ದರಿಂದ ಪರ್ಯಾಯ ಬೆಳೆಗಳಾದ ರಾಗಿ, ನವಣೆ, ಸಜ್ಜೆ, ಸೂರ್ಯಕಾಂತಿ ಬಿತ್ತನೆ ಮಾಡುವಂತೆ ಸಲಹೆಯನ್ನು ನೀಡಲಾಗುತ್ತಿದೆ ಎಂದು ತಿಳಿಸಿದರು.ತೋಟಗಾರಿಕೆ ಸಹಾಯಕ ನಿರ್ದೇಶಕರಾದ ಕುಬೇರಾಚಾರಿ ಇವರು ತೋಟಗಾರಿಕೆ ಬೆಳೆಗಳನ್ನು 716 ಹೆಕ್ಟೇರ್ 315 ಹೆಕ್ಟತ್ ಬಿತ್ತನೆಯಾಗಿದೆ. ಟಮೋಟಾ, ಮೆಣಸಿನಕಾಯಿ, ಈರುಳ್ಳಿ, ಮಿಡಿಸೌತೆ ಬೆಳೆದಿರುತ್ತಾರೆ. ರೈತರು ರೈತ ಆಪ್ನಲ್ಲಿ ಮಾಹಿತಿಯನ್ನು ನೀಡಬೇಕಿದೆ ಎಂದು ತಿಳಿಸಿದ್ದಕ್ಕೆ ರೈತರಿಗೆ ಮಾಹಿತಿ ಕೊರತೆ ಇರುತ್ತದೆ. ಅದ್ದರಿಂದ ನಿಮ್ಮ ಇಲಾಖೆಯವರಿಂದ ಸೂಕ್ತ ಮಾರ್ಗದರ್ಶನ ನೀಡಬೇಕು ಎಂದು ತಿಳಿಸಿದರು.

ರೈತರು ಸೋಲಾರ್ ವಿದ್ಯುತ್ ಅಳವಡಿಸಿಕೊಳ್ಳಲು ವ್ಯಾಪಕ ಪ್ರಚಾರ ಮಾಡಬೇಕು ಇದರಿಂದಾಗಿ ರೈತರಿಗೆ ವಿದ್ಯುತ್ ನಿಲುಗಡೆ ಸಮಸ್ಯೆಯಿಂದ ಆಗುವ ತೊಂದರೆ ತಪ್ಪುತ್ತದೆ ಎಂದು ತಿಳಿಸಿದರು. ರೇಷ್ಮೆ ವಿಸ್ತರಣಾಧಿಕಾರಿ ರಾಜಾಭಕ್ಷಿ ಇವರು ಕೊಟ್ಟೂರು ತಾಲೂಕಿನಲ್ಲಿ 110 ಹೆಕ್ಟರ್ ರೇಷ್ಮೆ ಬೆಳೆ ಗುರಿ ಇದ್ದು, 20 ಹೆಕ್ಟರ್ನಲ್ಲಿ ಬೆಳೆದಿರುತ್ತಾರೆ. ರಾಂಪುರ, ಚಿರಿಬಿ ಗ್ರಾಮದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ರೇಷ್ಮೆ ಬೆಳೆಯುತ್ತಿದ್ದು, ಕೊಟ್ಟೂರು–ಕೂಡ್ಲಿಗಿ ಭಾಗದ ರೇಷ್ಮೆಗೆ ಹೆಚ್ಚಿನ ಬೇಡಿಕೆ ಇದೆ ಎಂದು ತಿಳಿಸಿದರು.ಮುಖ್ಯಪಶುವೈಧ್ಯಾಧಿಕಾರಿಗಳಾದ ಡಾ.ಚಂದ್ರಾನಾಯ್ಕ ಇವರು ಕೊಟ್ಟೂರು ತಾಲೂಕಿನಲ್ಲಿ ಪ್ರತಿ ದಿನಕ್ಕೆ 157 ಟನ್ ಮೇವು ಬೇಕಾಗುತ್ತದೆ. ಹಾಲೀ ನಾಲ್ಕು ತಿಂಗಳವರೆಗೆ ಸಾಕಾಗುವಷ್ಟು ಮೇವು ಲಭ್ಯವಿದ್ದು, ಡಿಸೆಂಬರ್–ಜನವರಿಯಿಂದ ಸಮಸ್ಯೆ ಬರಬಹುದು. ಕುರಿಗಳಿಗೆ ಜಂತುನಾಶಕವನ್ನು ನೊಂದಣಿಯಾದವರಿಗೆ ಮಾತ್ರ ನೀಡಲಾಗುತ್ತಿದೆ. 2000 ಮಿನಿ ಕಿಟ್ ಬೇಡಿಕೆ ಸಲ್ಲಿಸಲಾಗಿದೆ ಎಂದು ತಿಳಿಸಿದರು.ಪಟ್ಟಣ ಹಾಗೂ ಗ್ರಾಮೀಣ ಭಾಗದಲ್ಲಿ ಕುಡಿಯುವ ನೀರಿನ ಸಮಸ್ಸೆ ಬಗ್ಗೆ ಮಾಹಿತಿಯನ್ನು ಪಡೆಯಲಾಗಿ ಮುಖ್ಯಾಧಿಕಾರಿಗಳು ಪಟ್ಟಣದಲ್ಲಿ ವಿದ್ಯುತ್ ತೊಂದರೆಯಿಂದ ವ್ಯತ್ಯಯವಾಗುತ್ತಿದೆ ಎಂದು ತಿಳಿಸಲಾಗಿ ಜೆಸ್ಕಾಂ ಎಇಇ ನಾಗರಾಜ ಇವರಿಗೆ ಕೂಡಲೇ 63 ಕೆವಿ ಟಿಸಿಯನ್ನು ನೀಡಿ ಸದರಿ ಸಮಸ್ಯೆಯನ್ನು ಬಗೆಹರಿಸುವಂತೆ ತಿಳಿಸಿದರು.

ಪ್ರತಿಯೊಂದು ಪಂಚಾಯಿತಿಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯನ್ನು ಆಲಿಸಿ ಕೂಡಲೇ ವ್ಯವಸ್ಥೆಯನ್ನು ಮಾಡುವಂತೆ ಎಇಇ ಗ್ರಾಮೀಣ ಕುಡಿಯುವ ನೀರು ಸರಬರಾಜು ಇಲಾಖೆಯ ಪ್ರಸನ್ನ ಬಿ ಆರ್ ಇವರಿಗೆ ಸೂಚಿಸಿದರು.ಪಿಡಿಒ ರವರು ಕಡ್ಡಾಯವಾಗಿ ಕೇಂದ್ರಸ್ಥಾನದಲ್ಲಿ ವಾಸವಾಗಿದ್ದು, ಕುಡಿಯುವ ನೀರಿನ ಸಮಸ್ಯೆಯ ಬಗ್ಗೆ ಮುನ್ನೆಚ್ಚರಿಕೆಯನ್ನು ಕೈಗೊಳ್ಳಬೇಕು. ಇ–ಸ್ವತ್ತನ್ನು ನೇರವಾಗಿ ಎ ಖಾತಾ ನೀಡುವಂತೆ ಸಲಹೆ ನೀಡಿದರು.ಸಾರ್ವಜನಿಕರಿಂದ ದೂರು ಬಾರದ ರೀತಿಯಲ್ಲಿ ಕರ್ತವನ್ನು ನಿರ್ವಹಿಸಬೇಕು.ಬರ ನಿರ್ವಹಣೆಯಲ್ಲಿ ಯಾರೂ ನಿರ್ಲಕ್ಷ್ಯತನವನ್ನು ತೋರುವಂತಿಲ್ಲ ಎಂದು ಎಚ್ಚರಿಕೆಯನ್ನು ನೀಡಿದರು.

ಸಭೆಯಲ್ಲಿ ತಹಶೀಲ್ದಾರ್ ಅಮರೇಶ್ ಜಿ ಕೆ, ಕಾರ್ಯನಿರ್ವಾಹಕ ಅಧಿಕಾರಿ ಡಾ.ಕೆ ಆನಂದ ಕುಮಾರ್, ಮುಖ್ಯಾಧಿಕಾರಿ ಎ ನಸರುಲ್ಲಾ, ತಾಲೂಕು ವೈಧ್ಯಾಧಿಕಾರಿ ಪ್ರದೀಪ್, ನರೇಗಾ ಎಡಿ ಹೆಚ್ ವಿಜಯಕುಮಾರ್, ಎಲ್ಲಾ ಗ್ರಾಮ ಪಂಚಾಯಿತಿಗಳ ಪಿಡಿಒ, ಕಂದಾಯ ನಿರೀಕ್ಷಕ ಡಿ ಶಿವಕುಮಾರ್, ಗ್ರಾಮ ಆಡಳಿತ ಅಧಿಕಾರಿಗಳು ಹಾಜರಿದ್ದರು. ಸಿ ಮ ಗುರುಬಸವರಾಜ ಸ್ವಾಗತಿಸಿ ನಿರ್ವಹಿಸಿದರು.

**Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.**
**Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE**